ಸಂಪುಟ 01 | ಸಂಚಿಕೆ 43 | ಬುಧವಾರ 24 ಡಿಸೆಂಬರ್ 2025 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1. ರಾಷ್ಟ್ರೀಯ ಗ್ರಾಹಕ ಹಕ್ಕುಗಳ ದಿನ (National Consumer Rights Day)**

24 ಡಿಸೆಂಬರ್‌ನ್ನು ಭಾರತದಲ್ಲಿ ರಾಷ್ಟ್ರೀಯ ಗ್ರಾಹಕ ಹಕ್ಕುಗಳ ದಿನ ಆಗಿ ಆಚರಿಸಲಾಗುತ್ತದೆ.ಈ ದಿನದ ಉದ್ದೇಶ ಗ್ರಾಹಕರ ಹಕ್ಕುಗಳು, ಸುರಕ್ಷತೆ ಮತ್ತು ನ್ಯಾಯದ ಬಗ್ಗೆ ಜನರಲ್ಲಿ ಸುದ್ದಿ ಹರಡುವುದು ಮತ್ತು ಗ್ರಾಹಕರ ಕೈಕುಳಕರನ್ನು ತಪ್ಪಿಸಲು ಜಾಗೃತಿ ಮೂಡಿಸುವುದು.1986 ರ ರಜೆನಷ್ಟಿ ಕಾನೂನು (Consumer Protection Act) ಈ ದಿನಕ್ಕೆ ಅನುಸಾರವಾಗಿ ಜಾರಿಗೊಳ್ಳಲಾರಂಭಿಸಿತ್ತು.

**2. ಕ್ರಿಸ್‌ಮಸ್ ಈವ್ (Christmas Eve)**

ಡಿಸೆಂಬರ್ 24 ರಂದು, ವಿಶ್ವದ ಅನೇಕ ಕ್ರೈಸ್ತ ಮತ್ತು ಅನೇಕ ದೇಶಗಳಲ್ಲಿ ಕ್ರಿಸ್‌ಮಸ್ ಹಬ್ಬದ ಮೊದಲಿನ ಸಂಜೆ, ಅಂದರೆ Christmas Eve ಆಗಿದೆ.ಇದು ಕ್ರಿಸ್‌ಮಸ್ ದಿನದ (25 ಡಿಸೆಂಬರ್) ತಯಾರಿ ಮತ್ತು ಕುಟುಂಬ, ಸ್ನೇಹಿತರು ಒಟ್ಟಾಗಿ ಸೇರಿ ಆಚರಿಸುವ ವಿಶೇಷ ಸಂಭ್ರಮದ ದಿನವಾಗಿ ಪರಿಗಣಿಸಲಾಗುತ್ತದೆ.

**3.DMRC (Delhi Metro) ಸ್ಥಾಪನ ದಿನ ?** ಭಾರತ 24 ಡಿಸೆಂಬರ್ 2002 ರಂದು ದೆಹಲಿ ಮೆಟ್ರೋ ರೈಲು ಸರ್ವೀಸ್ ರೆಡ್ ಲೈನ್ ಅನ್ನು ಸಾರ್ವಜನಿಕರಿಗೆ ಮೊದಲಿಗೆ ಉದ್ಘಾಟಿಸಲಾಯಿತು.ಅದನ್ನು ಸ್ಮರಿಸುವ ಉತ್ಸಾಹವಾಗಿಯೂ ಕೆಲವೂರು ಸ್ಥಳಗಳಲ್ಲಿ ಈ ದಿನವನ್ನು DMRC Foundation ಆಚಿಥಿ ಎಂದು ಗುರುತಿಸಲಾಗುತ್ತದೆ.

## ಸುಭಾಷಿತ

ಜೀವನದಲ್ಲಿ ಅಪಾಯಕಾರಿ ಸವಾಲುಗಳನ್ನು ಸ್ವೀಕರಿಸಿ. ಅದರಲ್ಲಿ ಗೆದ್ದರೆ, ಮಾರ್ಗಪ್ರವರ್ತಕರಾಗ-ಬಹುದು; ಸೋತರೆ ಮಾರ್ಗದರ್ಶನ ನೀಡಬಹುದು!

ವಿವೇಕ್ ಬಿಂದ್ರಾ

## ಡಿ.24 ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

ನೈಜ್ಯ ದೇಸೆ ನ್ಯೂಸ್

ರಾಯಚೂರು: ಡಿಸೆಂಬರ್ 23 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ-2025ರ ಕಾರ್ಯಕ್ರಮವನ್ನು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಕೆ.ವಿ.ಸುರೇಂದ್ರ ಕುಮಾರ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಪ್ರಭುದೇವ್, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ವಕೀಲರಾದ ಗೌರೀಶ್ ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದು ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತ-ಪಾಕ್ ಪರಮಾಣು ಯುದ್ಧ, ಯುದ್ಧ ನಿಲ್ಲಿಸಿದ್ದು ನಾನೇ

# ಮತ್ತೊಮ್ಮೆ ಕನವರಿಸಿದ ಟ್ರಂಪ್



ನ್ಯೂಯಾರ್ಕ್: ಭಾರತ-ಪಾಕಿಸ್ತಾನ ಸಂಘರ್ಷವನ್ನು ಪರಿಹರಿಸುವ ತಮ್ಮ ಹೇಳಿಕೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪುನರಾವರ್ತಿಸಿದ್ದಾರೆ ಮತ್ತು ಲಕ್ಷಾಂತರ ಜೀವಗಳನ್ನು ಉಳಿಸಿದ್ದಕ್ಕಾಗಿ ಇಸ್ಲಾಮಾಬಾದ್ ನಾಯಕತ್ವವು ಅವರಿಗೆ ಮನ್ನಣೆ ನೀಡಿದೆ ಎಂದು ಹೇಳಿದ್ದಾರೆ.

ನಾವು ಪಾಕಿಸ್ತಾನ ಮತ್ತು ಭಾರತದ ನಡುವಿನ ಸಂಭಾವ್ಯ ಪರಮಾಣು ಯುದ್ಧವನ್ನು ನಿಲ್ಲಿಸಿದ್ದೇವೆ. ಮತ್ತು ಪಾಕಿಸ್ತಾನದ ಮುಖ್ಯಸ್ಥ, ಅತ್ಯಂತ ಗೌರವಾನ್ವಿತ ಜನರಲ್ ಫೀಲ್ಡ್ ಮಾರ್ಷಲ್ ಮತ್ತು ಪಾಕಿಸ್ತಾನದ ಪ್ರಧಾನ ಮಂತ್ರಿಯೂ ಆಗಿದ್ದಾರೆ ಎಂದು ಅಧ್ಯಕ್ಷ ಟ್ರಂಪ್ 10 ಮಿಲಿಯನ್ ಜೀವಗಳನ್ನು ಉಳಿಸಿದ್ದಾರೆ ಎಂದಿದ್ದಾರೆ. ಫ್ಲೋರಿಡಾದ ಮಾರ್-ಎ-ಲಾಗೊದಲ್ಲಿ ಅವರು ಈ ಹೇಳಿಕೆಗಳನ್ನು ನೀಡಿದರು, ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್, ನೌಕಾಪಡೆ ಕಾರ್ಯದರ್ಶಿ ಜಾನ್ ಫೆಲಾನ್ ಮತ್ತು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರ ಪಕ್ಕದಲ್ಲಿ ನಿಮಗೆ ತಿಳಿದಿದೆ, ಎಂಟು ವಿಮಾನಗಳನ್ನು ಹೊಡೆದುರುಳಿಸಲಾಯಿತು. ಆ ಯುದ್ಧವು ಉಗ್ರವಾಗಿ ಪ್ರಾರಂಭವಾಗುತ್ತಿತ್ತು, ಮತ್ತು ಅವರು ವಾಸ್ತವವಾಗಿ ಇನ್ನೊಂದು ದಿನ ಅಧ್ಯಕ್ಷ ಟ್ರಂಪ್ 10 ಮಿಲಿಯನ್ ಜೀವಗಳನ್ನು, ಬಹುಶಃ ಹೆಚ್ಚು ಜೀವಗಳನ್ನು ಉಳಿಸಿದ್ದಾರೆ ಎಂದು ಹೇಳಿದರು.

ಆದ್ದರಿಂದ ನಾವು ಈ ಎಲ್ಲಾ ಯುದ್ಧಗಳನ್ನು ಪರಿಹರಿಸಿದ್ದೇವೆ. ನಾನು ಇನ್ನೂ ಪರಿಹರಿಸದ ಏಕೈಕ ಯುದ್ಧವೆಂದರೆ ರಷ್ಯಾ, ಉಕ್ರೇನ್, ಎಂದು ಅವರು ಹೇಳಿದರು. ಮೇ 10 ರಂದು, ವಾಷಿಂಗ್ಟನ್ ಮಧ್ಯಸ್ಥಿಕೆಯಲ್ಲಿ ದೀರ್ಘ ರಾತ್ರಿ ಮಾತುಕತೆಯ ನಂತರ ಭಾರತ ಮತ್ತು ಪಾಕಿಸ್ತಾನ ಪೂರ್ಣ ಮತ್ತು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಟ್ರಂಪ್ ಸಾಮಾಜಿಕ ಮಾಧ್ಯಮದಲ್ಲಿ ಘೋಷಿಸಿದಾಗಿನಿಂದ, ಅವರು ಎರಡು ನೆರೆಹೊರೆಯವರ ನಡುವಿನ ಉದ್ವಿಗ್ನತೆಯನ್ನು ಇತ್ಯರ್ಥಗೊಳಿಸಲು ಸಹಾಯ ಮಾಡಿದ್ದಾರೆ ಎಂದು 60 ಕ್ಕೂ ಹೆಚ್ಚು ಬಾರಿ ತಮ್ಮ ಹೇಳಿಕೆಯನ್ನು ಪುನರಾವರ್ತಿಸಿದ್ದಾರೆ.

ನವದೆಹಲಿ ನಿರಂತರವಾಗಿ ಯಾವುದೇ ಮೂರನೇ ವ್ಯಕ್ತಿಯ ಹಸ್ತಕ್ಷೇಪವನ್ನು ನಿರಾಕರಿಸಿದೆ.ಏಪ್ರಿಲ್ 22 ರಂದು 26 ನಾಗರಿಕರನ್ನು ಕೊಂದ ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತವು ಮೇ 7 ರಂದು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು.ನಾಲ್ಕು ದಿನಗಳ ತೀವ್ರ ಗಡಿಯಾಚೆಗಿನ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ ಸಂಘರ್ಷವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಒಪ್ಪಂದಕ್ಕೆ ಬಂದವು.

## ವಿವಿಧ ಬೇಡಿಕೆಗಳ ಈಡೆರಿಕೆಗಾಗಿ ಜಾನೆಕಲ್ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ದಲಿತಪರ ಸಂಘಟನೆಗಳಿಂದ ಪ್ರತಿಭಟನೆ



ನೈಜ್ಯ ದೇಸೆ ನ್ಯೂಸ್

ಮಾನ್ವಿ: ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ತಾಲೂಕಿನ ಜಾನೆಕಲ್ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಹಾಗೂ ವಿವಿಧ ದಲಿತಪರ ಸಂಘಟನೆಗಳಿಂದ ನಡೆದ ಪ್ರತಿಭಟನೆ ಧರಣಿಯಲ್ಲಿ ಗವಿಗಟ್ಟ ಗ್ರಾ.ಪಂ.ಸದಸ್ಯ ದೇವೆಂದ್ರಪ್ಪ ಮಾತನಾಡಿ ಜಾನೆಕಲ್ ಗ್ರಾಮಪಂಚಾಯಿತಿಯಲ್ಲಿ 15 ನೇ ಹಣಕಾಸು ಯೋಜನೆಯ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ಪರಿಶೀಲನೆ ನಡೆಸಬೇಕು, ಗ್ರಾ.ಪಂ. ವತಿಯಿಂದ ಸಂಗ್ರಹಿಸಲಾದ ತೆರಿಗೆ ಹಣದ ಮಾಹಿತಿ ನೀಡಬೇಕು.

ಬಸವ ವಸತಿ,ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳನ್ನು ಗ್ರಾಮ ಸಭೆ ಮೂಲಕ ಹಂಚಿಕೆ ಮಾಡಬೇಕು, ಈ ಸ್ವತ್ತು ಯೋಜನೆಯಡಿಯಲ್ಲಿ ಆಸ್ತಿ ಮಾಲಿಕರಿಗೆ ಖಾತಾ ಉತಾರ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿನಾಕರಣ ವಿಳಂಬ ಮಾಡುವ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ,ಗವಿಗಟ್ಟ ಗ್ರಾಮದಲ್ಲಿ ಶಕ್ತಿ ಭವನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು,ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು.

ಗ್ರಾಮದ ಶಾಲೆಯಲ್ಲಿ ಕೈಗೊಳ್ಳಲಾದ ಮಳೆನೀರು ಕೊಯ್ಲು ಕಾಮಗಾರಿ, ಮರಂ ರಸ್ತೆ ಕಾಮಗಾರಿಯ ಬಾಕಿ ಇರುವ ಬಿಲ್ ಪಾವತಿ ಮಾಡಬೇಕು,ನರೇಗಾ ಕೂಲಿ ಕಾರ್ಮಿಕರಿಗೆ ಸಮರ್ಪಕವಾಗಿ ಕೂಲಿ ಕೆಲಸವನ್ನು ನೀಡದೆ ಇರುವ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು. ಎಂದು ಒತ್ತಾಯಿಸಿದರು. ಗ್ರಾಮ ಪಂಚಾಯಿತಿ ಸದಸ್ಯರಾದ ಜೆ.ರಮೇಶ ನಾಯಕ ಗವಿಗಟ್ಟ, ದಲಿತ ಸೇನೆ ತಾ.ಅಧ್ಯಕ್ಷರಾದ ರಮೇಶ ಕರೆಗುಡ್ಡ,ಗೌ. ಅಧ್ಯಕ್ಷರಾದ ಕರಿಯಪ್ಪ ನಕ್ಕುಂದಿ, ಭೀಮರಾಯ, ಮುತ್ತಣ್ಣ, ಹುಸೇನಪ್ಪ,ಮಾರೇಶ, ಬಿ.ಅಮರೇಶನಾಯಕ, ಮಾರೇಶ ಬಂಡಾರಿ, ಬಡಕಪ್ಪ, ನಾಗರಾಜ, ಶಾಂತ ಕುಮಾರ, ಚನ್ನಪ್ಪ ಗೌಡ, ಮೌನೇಶ, ಮರಿಸ್ವಾಮಿ,ಸುಧಾಕರ ಅರೋಲಿ, ಸೇರಿದಂತೆ ಇನ್ನಿತರರು ಇದ್ದರು.

## ಜನತಾ ಕಾಲೋನಿಯಲ್ಲಿ ಪಲ್ಸ್ ಪೋಲಿಯೋ ಜಾಗೃತಿ ಹಾಗೂ ಲಸಿಕಾ ಅಭಿಯಾನ



ನೈಜ್ಯ ದೇಸೆ ನ್ಯೂಸ್

ದೇವಸುಗೂರು: ಗ್ರಾಮದ ಜನತಾ ಕಾಲೋನಿಯಲ್ಲಿ ಐದು ವರ್ಷದೊಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಮತ್ತು ಲಸಿಕೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ವಿಶೇಷ ಅಭಿಯಾನವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲಾಯಿತು. ದೇವಸುಗೂರು ಗ್ರಾಮದ ಶಾರದಾ ಮಹಿಳಾ ಸ್ವ ಸಹಾಯ ಸಂಘ, ಜನತಾ ಕಾಲೋನಿ ಹಾಗೂ ರಾಯಚೂರಿನ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆಯ ವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಅಭಿಯಾನದ ಅಂಗವಾಗಿ ತಂಡವು ಕಾಲೋನಿಯ ಪ್ರತಿ ಮನೆಗೆ ಭೇಟಿ ನೀಡಿ, ಲಸಿಕೆ ಪಡೆಯದ ಮಕ್ಕಳನ್ನು ಗುರುತಿಸಿ ಅವರಿಗೆ ಲಸಿಕೆ ಹಾಕುವ ಕಾರ್ಯವನ್ನು ಕೈಗೊಂಡಿತು. ಸ್ಥಳೀಯ ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರೊಂದಿಗೆ ಸೇರಿ ಮನೆ ಮನೆಗೆ ತೆರಳಿದ ತಂಡವು, ಪೋಲಿಯೋ ಮುಕ್ತ ಸಮಾಜದ ಕುರಿತು ಜನರಲ್ಲಿ ಜಾಗೃತಿ ಮೂಡಿಸಿತು. ಶಾರದಾ ಮಹಿಳಾ ಸ್ವ ಸಹಾಯ ಸಂಘದ ಸದಸ್ಯರಾದ ಶ್ರೀಮತಿ ಸೂಗಮ್ಮ ಅವರು ಮಗುವಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಅಧಿಕೃತವಾಗಿ ಚಾಲನೆ ನೀಡಿದರು.

ಈ ಮಹತ್ವದ ಕಾರ್ಯಕ್ರಮದಲ್ಲಿ ಸ್ಥಳೀಯ ಅಂಗನವಾಡಿ ಕಾರ್ಯಕರ್ತೆ ಶ್ರೀಮತಿ ಕನ್ಯಾಕುಮಾರಿ, ಆಶಾ ಕಾರ್ಯಕರ್ತೆ ಶ್ರೀಮತಿ ಶರಣಮ್ಮ ಸೇರಿದಂತೆ ಸಂಘದ ಸದಸ್ಯರಾದ ಶ್ರೀದೇವಿ, ಶಂಬಾವಿ, ನವೀನ, ಸರೋಜಮ್ಮ, ಲಕ್ಷ್ಮಿ, ಅನಿತಾ ಮತ್ತು ಹನುಮಂತಿ ಅವರು ಸಕ್ರಿಯವಾಗಿ ಪಾಲ್ಗೊಂಡಿದ್ದರು. ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆಯ ಸಂಯೋಜಕರಾದ ವಿನಾಯಕ

## ಪತ್ರಕರ್ತರಿಗೆ ಅಭಿನಂದನಾ ಪೂರ್ವಕ ಸನ್ಮಾನ: ಸಮಾಜ ಸೇವಕ ವೀರೇಶ್ ಎನ್ ಉಪ್ಪಲದೊಡ್ಡಿ ಅವರ ಸಮಾಜಮುಖಿ ಕಾರ್ಯಕ್ಕೆ ಮೆಚ್ಚುಗೆ



ನೈಜ್ಯ ದೇಸೆ ನ್ಯೂಸ್

ಸಿಂಧನೂರು: ತಾಲೂಕಿನ ಅಭಿವೃದ್ಧಿ ಹಾಗೂ ಜನಸಾಮಾನ್ಯರ ಧ್ವನಿಯಾಗಿ ಕೆಲಸ ಮಾಡುತ್ತಿರುವ ಸಮಾಜ ಸೇವಕರಾದ ಶ್ರೀ ವೀರೇಶ್ ಎನ್. ಉಪ್ಪಲದೊಡ್ಡಿ ಅವರು ಬಣ್ಣಿಸಿದರು. ನಗರದ ಸರ್ಕಿಟ್ ಹೌಸ್‌ನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ, ಸಿಂಧನೂರು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳನ್ನು ಗೌರವಪೂರ್ವಕವಾಗಿ ಸನ್ಮಾನಿಸಿ ಅವರು ಮಾತನಾಡಿದರು.

ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಪತ್ರಕರ್ತರು ಸಂಕಷ್ಟದ ನಡುವೆಯೂ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ಅಂತಹ ಶ್ರಮಜೀವಿಗಳನ್ನು ಗುರುತಿಸಿ ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಅವರು ಆಶಯ ವ್ಯಕ್ತಪಡಿಸಿದರು. ಕೇವಲ ರಾಜಕೀಯಕ್ಕೆ ಸೀಮಿತವಾಗದೆ, ಇನ್ಫೋಸಿಸ್ ಬ್ರೌಸಿಂಗ್ ಸೆಂಟರ್ ಮೂಲಕ ತಂತ್ರಜ್ಞಾನ ಸೇವೆಯನ್ನು ಒದಗಿಸುತ್ತಾ, ಸದಾ ಸಮಾಜದ ಹಿತವನ್ನು ಬಯಸುವ ವೀರೇಶ್ ಉಪ್ಪಲದೊಡ್ಡಿ ಅವರ ಈ ಔದಾರ್ಯಕ್ಕೆ ಪತ್ರಕರ್ತರು ಹರ್ಷ ವ್ಯಕ್ತಪಡಿಸಿದರು. ಸನ್ಮಾನ ಸ್ವೀಕರಿಸಿದ ಪತ್ರಕರ್ತರು ಮಾತನಾಡಿ, "ವೀರೇಶ್ ಉಪ್ಪಲದೊಡ್ಡಿ ಅವರ ಈ ಪ್ರೀತಿ ಮತ್ತು ಗೌರವ ನಮ್ಮ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ" ಎಂದು ಸ್ಮರಿಸಿದರು. ಕಾರ್ಯಕ್ರಮದಲ್ಲಿ ವೀರೇಶ್ ಎನ್. ಉಪ್ಪಲದೊಡ್ಡಿ ಗೆಳೆಯರ ಬಳಗದ ಸದಸ್ಯರು ಹಾಗೂ ತಾಲೂಕಿನ ಹಿರಿಯ ಮತ್ತು ಕಿರಿಯ ಪತ್ರಕರ್ತರು ಉಪಸ್ಥಿತರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಧರ್ಮಸಭೆ ಹಾಗೂ ಗೌರವ ಸನ್ಮಾನ ಕಾರ್ಯಕ್ರಮ

ನೈಜ್ಯ ದೇಸೆ ನ್ಯೂಸ್

ಕೊಡೇಕಲ್ಲ: ನಾಡಿನಲ್ಲಿ ಸೌಹಾರ್ದತೆ ಸಹಬಾಳ್ವೆ ಹಾಗೂ ಸಮಾನತೆಗೆ ಹೆಸರುವಾಸಿ ಆದಂತಹ ಪರಮಪೂಜ್ಯ ಶ್ರೀ ಬಸವರಾಜಯ್ಯ ಅಪ್ಪನವರ 11ನೇ ಪುಣ್ಯಾರಾಧನೆ ಅಂಗವಾಗಿ ಇಂದು ದಿನಾಂಕ 24 12 2025 ಬುಧವಾರ ಬೆಳಿಗ್ಗೆ 11 ಗಂಟೆಗೆ ಶ್ರೀ ನಿಜಲಿಂಗೇಶ್ವರ ಮಠದ ಆವರಣದಲ್ಲಿ ಧರ್ಮಸಭೆ ಹಾಗೂ ಗೌರವ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ನಾಡಿನ ಖ್ಯಾತ ಚಿಂತಕರಾದ ಶ್ರೀ ಅಕ್ಬರ್ ಅಲಿ ಉಡುಪಿ ರವರು ವಿಶೇಷ ಉಪನ್ಯಾಸವನ್ನು ನೀಡಲಿದ್ದಾರೆ . ಕೊಡೆಕಲ್ ಹಾಗೂ ಸುತ್ತಮುತ್ತಲಿನ ಗ್ರಾಮದ ಗ್ರಾಮಸ್ಥರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕಾಗಿ ಈ ಮೂಲಕ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



## ಸಾಹಿತ್ಯ ಸಿಂಚನ

ಅನ್ನದಾತ

ಪರಿಶ್ರಮದಿ ಉಳಿಮೆ ಮಾಡುವ ನೇಗಿಲಯೋಗಿ
ಅನ್ನದಾತ
ಬಿಸಿಲಲ್ಲಿ ಬೆವರು ಹರಿಸುವ ಕಾಯಕಯೋಗಿ
ಮಣ್ಣಿನಮಗ ಈತ

ಸಮಾಜದಲ್ಲಿ ಅತ್ಯಂತ ಶ್ರಮಜೀವಿ ರೈತ
ರೈತ ಇಲ್ಲದಿದ್ದರೆ ನಾವೆಲ್ಲರೂ ಗೋತಾ

ಹೆಣ್ಣು ಕೊಡುವವರಿಗೆ ಬೇಕು ಜಮೀನು
ಹುಡುಗ ಮಾತ್ರ ಆಗಿರಬಾರದು ರೈತನು

ತಾನು ಹಸಿದು ದೇಶದ ಹೊಟ್ಟೆ ತುಂಬಿಸುವ ರೈತ
ಕೈತುತ್ತನಿಟ್ಟು ನಮ್ಮನ್ನೆಲ್ಲ ಪೋಷಿಸುವ ನಾಯಕನೀತ

ಬೆಳೆದ ಬೆಳೆಗೆ ಬೆಲೆ ಸಿಗದಿದ್ದಾಗ ತತ್ತರಿಸುವ ರೈತರು
ಹೇಳತೀರದು ಆಗ ರೈತರ ಕಷ್ಟದ ಕಣ್ಣೀರು

ಭೂಮಿಯ ಹೆಮ್ಮೆಯ ಪುತ್ರರು ರೈತರು
ರೈತ ಮತ್ತು ಭೂಮಿ ಬಿಡಿಸಲಾರದ ನಂಟರು

ರೈತರ ದುಡಿಮೆಗೆ ಸರ್ಕಾರ ಎಷ್ಟು ಕೊಟ್ಟರೂ
ಸಾಲದು
ಆದರೂ ಪ್ರತಿವರ್ಷ ಸಾಲದ ಬಾಧೆಯಲ್ಲಿ ರೈತರ
ಸಾವು ನಿಲ್ಲದು

ಬ್ಯಾಂಕು ಕೊಡುವುದು ರೈತರಿಗೆ ಸಾಲವನ್ನು
ಮರು ಪಾವತಿಸದಿದ್ದರೆ ತೆಗೆಯುವರು ರೈತರ
ಪ್ರಾಣವನ್ನು

ಭೂತಾಯಿ ಆಶೀರ್ವಾದ ಸದಾ ರೈತರ ಮೇಲಿರಲಿ
ಸಮಯಕ್ಕೆ ತಕ್ಕಂತೆ ವರುಣನ ದಯವಿರಲಿ

ರೈತರಿಗಾಗಿ ಸರ್ಕಾರ ಸಹಾಯಹಸ್ತ ನೀಡುವಂತಾಗಲಿ
ಮುಂದೆಯಾದರೂ ರೈತರ ಜೀವನ ಸುಖಮಯವಾಗಿ
ಸಾಗಲಿ

ಶಾಂತಾ ಮಹೇಶ ಒಳಗಿನಮನಿ

# ವಿಕಲಚೇತನರ ಸಬಲೀಕರಣಕ್ಕೆ ಎಲ್ಲರ ಸಹಕಾರ ಅಗತ್ಯ: ಅಧ್ಯಕ್ಷ ವೈ. ಬೂಪನಗೌಡ

❑ ನೈಜ್ಯ ದೆಸೆ ನ್ಯೂಸ್

**ಸಿರವಾರ: ಪಟ್ಟಣದ ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯ ನಗರಾಭಿವೃದ್ಧಿ ಕೋಶ, ರಾಯಚೂರು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಯಚೂರು ಹಾಗೂ ಪಟ್ಟಣ ಪಂಚಾಯತ್ ಕಾರ್ಯಾಲಯ, ಸಿರವಾರ ಇವರ ಸಂಂ–ಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಿಕಲಚೇತನರ ಸಮನ್ವಯ (ವಾರ್ಡ್) ಸಭೆ ಯಶಸ್ವಿಯಾಗಿ ನಡೆಯಿತು.**




ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಟ್ಟಣ ಪಂಚಾಯತಿ ಅಧ್ಯಕ್ಷ ವೈ. ಬೂಪನಗೌಡ ಅವರು ವಹಿಸಿಕೊಂಡು ಮಾತನಾಡಿ, ವಿಕಲಚೇತನರ ಸಬಲೀಕರಣಕ್ಕೆ ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆ ಸೇರುವಂತೆ ಅಗತ್ಯ ಸೌಲಭ್ಯಗಳು, ಮಾಹಿತಿ ಮತ್ತು ಬೆಂಬಲ ನೀಡಬೇಕೆಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತಿ ಉಪಾಧ್ಯಕ್ಷೆ ಲಕ್ಷ್ಮಿದೇವಿ, ಸಮುದಾಯ ಸಂಘಟಕ ಹಂಪಯ್ಯ ಪಾಟೀಲ್, ಆರ್.ಐ ಗೋಪಾಲ್, ಸಂಕಲ್ಪ ವಿಕಲಚೇತನರ ಒಕ್ಕೂಟದ ಗೌರವಾಧ್ಯಕ್ಷ ದೇಸಾಯಿ ದೊತರಬಂಡಿ, ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷ ಶಿವಕುಮಾರ್ ಚಲ್ಮಲ್, ಗ್ರಾಮೀಣ ಪುನರ್ವಸತಿ ಕಾರ್ಯಕರ್ತ ನಂದಕುಮಾರ ಸೇ–ರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಸಭೆಯಲ್ಲಿ ವಿಕಲಚೇತನರ ಹಕ್ಕುಗಳು, ಸರ್ಕಾರದಿಂದ ಲಭ್ಯವಿರುವ ಸೌಲಭ್ಯಗಳು, ಪಿಂಚಣಿ, ಗುರುತಿನ ಚೀಟಿ, ಆರೋಗ್ಯ, ಶಿಕ್ಷಣ ಹಾಗೂ ಉದ್ಯೋಗಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಸಮಗ್ರ ಚರ್ಚೆ ನಡೆಯಿತು. ವಿಕಲಚೇತನರು ಮತ್ತು ಅವರ ಪಾಲಕರು ತಮ್ಮ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು. ಸಂಬಂಧಿಸಿದ ಇಲಾಖೆ ಅಧಿಕಾ–ರಿಗಳು ಸಮಸ್ಯೆಗಳಿಗೆ ಸ್ಪಂದಿಸಿ ಸೂಕ್ತ ಪರಿಹಾರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಕಾರ್ಯಕ್ರಮವು ವಿಕಲಚೇತನರಲ್ಲಿ ಆತ್ಮವಿಶ್ವಾಸ, ಜಾಗೃತಿ ಮತ್ತು ಸಬಲೀಕರಣದ ಸಂದೇಶವನ್ನು ನೀಡುವ ಮೂಲಕ ಅತ್ಯಂತ ಅರ್ಥಪೂರ್ಣವಾಗಿ ನೆರವೇರಿತು.

# ಎಇಇ ಬಿ.ವಿಜಯಲಕ್ಷ್ಮಿ ಮನೆ ಮೇಲೆ ಲೋಕಾಯುಕ್ತರು ದಾಳಿ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲೆಯ ಸಿಂಧನೂರು ಉಪ ವಿಭಾಗದ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಎಇಇ ಡಿ.ವಿಜಯಲಕ್ಷ್ಮಿ ಮನೆ ಸೇ–ರಿದಂತೆ ಒಟ್ಟು 5 ಕಡೆಗೆ ಲೋಕಾಯುಕ್ತ ಅಧಿಕಾ–ರಿಗಳು ಮಂಗಳವಾರ ದಾಳಿ ನಡೆಸಿದ್ದಾರೆ.**



ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ದೂರಿನ ಮೇರೆಗೆ ದಾಳಿ ಮಾಡಲಾಗಿದೆ. ರಾಯಚೂರಿನ ಗಂಗಾಪರಮೇಶ್ವರ ಲೇಔಟ್ ನಲ್ಲಿ ನಾಲ್ಕಂತಸ್ತಿನ ಮನೆ ಮತ್ತು ಪಕ್ಕದಲ್ಲೇ ಇರುವ ಇನ್ನೊಂದು ಮನೆಯಲ್ಲಿ ದಾಖಲೆಗಳ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ. ಅದರ ಜೊತೆಗೆ ಸಿಂಧನೂರು ಕಚೇರಿ, ಯಾದಗಿರಿ ತೋಟದ ಮನೆ, ಜೋಳದಡಗಿಯಲ್ಲಿರುವ ಅವರ ತಂಗಿ ಮನೆಯ ಮೇಲೆಯೂ ದಾಳಿ ನಡೆಸಲಾಗಿದೆ. ಯಾದಗಿರಿಯಲ್ಲಿ 30 ಎಕರೆ ಜಮೀನು, ಹಾಗೂ ಲೇಔಟ್ ಗಳು, ಚಂದ್ರಬಂಡಾ ಬಳಿ ಜಮೀನು, ಸೇರಿದಂತೆ ಸಾಕಷ್ಟು ಕಡೆ ಆಸ್ತಿ ಸಂಪಾದನೆ ಮಾಡಿರುವ ಮಾಹಿತಿಗಳು ಲಭ್ಯವಾಗಿದೆ. ರಾಯಚೂರು, ಕೊಪ್ಪಳ, ಹಾಗೂ ಬಳ್ಳಾರಿ ಜಿಲ್ಲೆ ಲೋಕಾಯುಕ್ತ ಪೊಲೀಸರು 5 ತಂಡಗಳು ರಚಿಸಿ ದಾಳಿ ಮಾಡಿದ್ದಾರೆ. ಇನ್ನೂ ಒಂದೂವರೆ ವರ್ಷ ಮಾತ್ರ ಸೇವಾವಧಿ ಬಾಕಿ ಇತ್ತು. ಇವರು ರಾಯಚೂರು ಮತ್ತು ಸಿಂಧನೂರಿನಲ್ಲಿಯೇ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದರು ಎಂಬ ಮಾಹಿತಿಯು ಇದೆ.

# ಪಲ್ಸ್ ಪೋಲಿಯೋ ಕಾರ್ಯಕ್ರಮ ನೋಡಲ್ ಅಧಿಕಾರಿ ಡಾಕ್ಟರ್ ಶಾಕೀರ್ DTO ಬೇಟಿ




❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಡಿ 23 ಆಶಾ ಕಾರ್ಯಕರ್ತರು ಹಾಗೂ ಪಲ್ಸ್ ಪೋಲಿಯೋ, ವ್ಯಾಕ್ಸಿನೇಟ–ರ್ ಗಳು ಇಂದು ಮನೆ ಮನೆಗೆ ಭೇಟಿ ನೀಡಿ ಪೋಲಿಯು ಲಸಿಕೆ ಹಾಕಿಸದ ಮಕ್ಕಳಿಗೆ ಮನೆ ಬಾಗಿಲಿಗೆ ತೆರೆ ತೆರಳಿ ಪೋಲಿಯೋ ಲಸಿಕೆ ಹಾಕಿದರು ಕಾರ್ಯಕ್ರಮದ ನೂಡಲ್ ಅಧಿಕ್ಯಾ–ರಿಯಾದಂತಹ ಡಾಕ್ಟರ್ ಶಕೀಲ್ ಜಿಲ್ಲಾ ಕ್ಷಯ ರೋಗ ಅಧಿಕಾರಿಗಳು ರಾಯಚೂರು ಅವರು ಪಲ್ಸ್ ಪೋಲಿಯೋ ತಂಡಗಳನ್ನು ಭೇಟಿ ಮಾಡಿ ಪರಿಶೀಲನೆ ನಡೆಸಿದರು.**

ಪಲ್ಸ್ ಪೋಲಿಯೋ ಕಾರ್ಯಕ್ರಮದ ಮೇಲ್ವಿಚಾರಕರಾದ ಃಕಿಒ ತ್ರಿವೇಣಿ ಆರೋಗ್ಯ ನಿರೀಕ್ಷಣಾಧಿಕಾರಿಗಳು ಆದ ಶ್ರೀ ಹನುಮಂತ ಮನೆ ಭೇಟಿ ನೀಡಿ ಪರಿಶೀಲನೆ ನಡೆಸುವುದರ ಮುಖಾಂತರ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಿದರೆ ಬಗ್ಗೆ ಖಚಿತಪಡಿಸಿಕೊಂಡರು ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದಂತಹ ಡಾಕ್ಟರ್ ಮೇರಿ ಭಂಡಾರಿ ಅವರಲ್ಲಿ ನೈಜ ದೆಶೆ ಪತ್ರಕರ್ತರು ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಕೇಳಿದ ಪ್ರಶ್ನೆಗೆ ಬೂತ್ ದಿನವೇ ಶೇಕಡ 98 ಪ್ರತಿಶತ ಗುರಿಯನ್ನು ಸಾಧಿಸಿದ್ದೇವೆ ಇನ್ನುಳಿದ ಮಕ್ಕಳಿಗೆ ಮನೆಮನೆ ಭೇಟಿ ಮಾಡುವುದರ ಮುಖಾಂತರ ಲಸಿಕೆಯನ್ನು ನೀಡಲಾಗುತ್ತಿದ್ದು ಸಂಪೂರ್ಣ 100 ಪ್ರತಿಶತ ಗುರಿಯನ್ನು ಮುಟ್ಟುವ ಪ್ರಯತ್ನದಲ್ಲಿ ಇದ್ದೇವೆ ಎಂದು ತಿಳಿಸಿದರು.

## ಕೃಷಿ ಇಲಾಖೆ ಸ್ಥಳಾಂತರ ವಿರೋಧ ನಡೆಸುತ್ತಿರುವ ಹೋರಾಟಕ್ಕೆ ಕೋಡಿಹಳ್ಳಿ ಚಂದ್ರಶೇಖರ್ ಭಾಗವಹಿಸಲಿದ್ದಾರೆ. ಶಿವಪುತ್ರ ಗೌಡ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಡಿ 23 ಕೃಷಿ ಇಲಾಖೆ ಸ್ಥಾಳಂತರ ವಿರೋಧಿಸಿ ನಡೆಸುತ್ತಿರುವ ಹೋರಾಟವು ಇಂದಿಗೆ 29 ನೇ ದಿನಕ್ಕೆ ಕಾಲಿಟ್ಟಿದ್ದು ಕೃಷಿ ಇಲಾಖೆ ಸಿಂಧನೂರಿಗೆ ಸ್ಥಳಾಂತರ ರದ್ದುಪಡಿಸಿ ಲಿಂಗಸಗೂರು ನಲ್ಲಿ ಕಾಯಂ ಉಳಿಸಲಾಗುವುದೆಂದು ಭರವಸೆಯನ್ನು ನೀಡಿದ್ದು ಆದೇಶವನ್ನು ಲಿಖಿತ ರೂಪದಲ್ಲಿ ಕೊಡಲೇಬೇಕು ಎಂದು ಕರ್ನಾಟಕ ಸರ್ಕಾರವನ್ನು ಒತ್ತಾಯಿಸುತ್ತಾ.**



ನಡೆಸುತ್ತಿರುವ ಹೋರಾಟಕ್ಕೆ ದಿನಾಂಕ 24 ರಂದು ರೈತ ಸಂಘದ ರಾಜ್ಯಾಧ್ಯಕ್ಷರಾದ ಕೋಡಿಹಳ್ಳಿ ಚಂದ್ರಶೇಖರ್ ರವರು ಈ ಹೋರಾಟದಲ್ಲಿ ಪಾಲ್ಗೊಳ್ಳಲಿದ್ದು ಲಿಂಗಸಗೂರಿನ ವಿವಿಧ ಸಂಘಟನೆ ಮುಖಂಡರು ಬುಧುವಾರ ದಿ 24 ರಂದು ಕೃಷಿ ಇಲಾಖೆಯ ಆವರಣದಲ್ಲಿ ಭಾಗವಹಿಸಬೇಕೆಂದು ರೈತ ಸಂಘದ ಜಿಲ್ಲಾಧ್ಯಕ್ಷರು ಶಿವಪುತ್ರ ಗೌಡ ನಂದಿಹಾಳ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖಾಸಗಿ ಶಿಕ್ಷಣ ಸಂಸ್ಥೆ ಗಳ ಒಕ್ಕೂಟ ನೂತನ ಪದಾಧಿಕಾರಿಗಳ ನೇಮಕ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ನಗರದ ಧ್ಯಾನ ಮಂದಿರದಲ್ಲಿ ಮಾನ್ವಿ ತಾಲೂಕ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು. ಗೌರವಾಧ್ಯಕ್ಷರಾಗಿ ಕಲ್ಮಠದ ವಿರೂಪಾಕ್ಷ ಮಹಾಸ್ವಾಮಿಗಳು, ಅಧ್ಯಕ್ಷರಾಗಿ ರಾಜಾ ಸುಭಾಷ್ ಚಂದ್ರನಾಯಕ, ಪ್ರಧಾನ ಕಾರ್ಯದರ್ಶಿ ಯಾಗಿ ರಾಜು ತಾಳಿಕೋಟಿ,**



ಸಹ ಕಾರ್ಯದರ್ಶಿ ಯಾಗಿ ಅಖಿಲೇಶ್ ಕುರ್ಡಿ, ಖಜಾಂಚಿ ಯಾಗಿ ಶರಣಬಸವ, ಉಪಾಧ್ಯಕ್ಷರಾಗಿ ಭೀಮರಾಯ ಸಿತಿಮನಿ, ಶಶಿಕಲಾ ಪಾಟೀಲ್, ಎಂ.ಎ.ಎಚ್. ಮುಖಿಮ್, ಸಂಘಟನಾ ಕಾರ್ಯದರ್ಶಿ ಯಾಗಿ ಸಂದೀಪ್ ಅವರನ್ನು ನೇಮಕ ಮಾಡಲಾಯಿತು.

# ಪ.ಪಂ.ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅಧ್ಯಕ್ಷೆಯಾಗಿ ಅವಿರೋದ ಆಯ್ಕೆ ಜನರ ಸಮಸ್ಯೆ ಆಲಿಸಬೇಕು – ಶಾಸಕ ಜಿ.ಹಂಪಯ್ಯ ನಾಯಕ

❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ಡಿ.22 ಪಟ್ಟಣ ಪಂಚಾಯತಿಯ ನೂತನ ಅಧ್ಯಕ್ಷೆಯಾಗಿ 14 ವಾರ್ಡನ್ ಶ್ರೀಮತಿ ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾ ಅಧಿಕಾರಿಯಾಗಿ ಆಗಮಿಸಿದ ಸಿರವಾರ ತಹಶಿಲ್ದಾರ ಅಶೋಕ ಪವಾರ್ ಹೇಳಿದರು.**



ಕಾರಣಾಂತರಗಳಿಂದ ಖಾಸೀಂ ಬಿ ಚಾಂದಪಾಷಾ ಇವರು ರಾಜಿನಾಮೆ ಸಿಲ್ಲಿಸಿದ ಕಾರಣಕ್ಕೆ ಹೊಸ ಅದ್ಯಕ್ಷ ರ ಆಯ್ಕೆ ಪ್ರಕ್ರಿಯೆ ನಡೆಯಿತು. ಒಟ್ಟು 16 ಜನ ಸದಸ್ಯ ಪೈಕಿ ರಾಜೇಶ್ವರಿ ತಿಪ್ಪಯ್ಯ ಸ್ವಾಮಿ ಒಬ್ಬರೆ ನಾಮ ಪತ್ರ ಸಲ್ಲಿಸಿದ್ದು 16 ಜನ ಸಂಖ್ಯಾ ಬಲದ ಸದಸ್ಯರ ಪೈಕಿ 11 ಜನ ಉಪಸ್ಥಿತರಿದ್ದು ಶಾಸಕರು ಒಂದು ಮತ ಚಲಾಯಿಸಿರುವರು, ನಿಗದಿತ ಸಮಯದ ಒಳಗೆ ಇತರೆ ಯಾವುದೇ ನಾಮ ಪತ್ರ ಸಲ್ಲಿಕೆಯಾಗಿರುವುದಿಲ್ಲ, ಮತ್ತು ಯಾವುದೇ ನಾಮಪತ್ರ ಹಿಂಪಡೆದಿರುದಿಲ್ಲ, ಆಯ್ಕೆಗೆ ಬೇಕಾದ ಕೋರಂ ಸಂಖ್ಯಾಬಲ ಇದ್ದ ಕಾರಣ ರಾಜೇಶ್ವರಿ ತಿಪ್ಪಯ್ಯಸ್ವಾಮಿಯವರನ್ನು ಅವಿರೋಧವಾಗಿ ಆಯ್ಕೆಮಾಡಲಾಗಿದೆ ಎಂದು ಸಿರವಾರ ತಹಶಿಲ್ದಾರ ಅಶೋಕ ಪವಾರ್ ಘೋಷಣೆ ಮಾಡಿದರು.

ಕಾಂಗ್ರೆಸ್ ಕಾರ್ಯಕರ್ತರು ಬೆಂಬಲಿಗರು ಪಟಾಕಿ ಹಚ್ಚಿ ಗುಲಾಲು ಎರಚಿಕೊಂಡು ಸಂಭ್ರಮಿಸಿದರು. ಶಾಸಕ ಜಿ.ಹಂಪಯ್ಯ ನಾಯಕ ಮಾತನಾಡಿ ಕಾಂಗ್ರೆಸ್ ಯಾವತ್ತಿದ್ದರು ಬಡವರು, ದಿನ ದಲಿತರು, ಶ್ರಮೀಕರ ಪಕ್ಷ, ಕವಿತಾಳ ಒಂದು ದೊಡ್ಡ ಪಟ್ಟಣ ಇಂತಹ ಒಂದು ಪಟ್ಟಣ ಪಂಚಾಯಿತಿಯ ಅಧ್ಯಕ್ಷೆಯಾಗಿ ಆಯ್ಕೆಯಾದ ರಾಜೇಶ್ವರಿಯವ–ರಿಗೆ ಅಭಿನಂದನೆಗಳನ್ನು ಸಲ್ಲಿಸಿದರು. ಮೂಲಭೂತ ಸೌಕರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಿ ಎಲ್ಲರೋಂದಿಗೆ ಬೆರೆತು ಅಧಿಕಾರ ನಿಭಾಯಿಸಬೇಕದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಮಾ.ಜಿ.ಪಂ.ಸದಸ್ಯ ಕಿರಿಲಿಂಗಪ್ಪ. ಮಾ.ತಾ.ಪಂ.ಸದಸ್ಯ ಮಾಳಪ್ಪ ತೋಳ, ಮಾಜಿ.ಅಧ್ಯಕ್ಷೆ ಖಾಸೀಂ ಬಿ ಚಾಂದಪಾಷಾ, ಉಪಾಧ್ಯಕ್ಷೆ ಎಲೀಜಾ ಓನಪ್ಪ , ಸದಸ್ಯರಾದ ರಮಾದೇವಿ, ಮಲ್ಲಿಕಾರ್ಜುನ ಗೌಡ, ಹುಲುಗಪ್ಪ, ಅಮರೇಶ ಕಟ್ಟಿಮನಿ , ರಮೇಶ ನಗನೂರು, ಮುಖಂಡರಾದ ರಾ.ವಾ.ವಿ.ವಿದ್ಯಾಲಯದ ಸಿಂಡಿಕೇಟ್ ಸದಸ್ಯ ಶಿವಣ್ಣ ವಕೀಲ್ ಶೇಖರಪ್ಪ ಸಾಹುಕಾರ್ ಹಟ್ಟಿ, ಚನ್ನರೇಡ್ಡಿ ಸಾಹುಕಾರ್ ಬಾವಿಕಟ್ಟಿ, ಶಿವರಾಜ ಭೋವಿ, ಹನುಮಂತ ಅರಕೇರಿ.

# ಹೋಲಿ ಫ್ಯಾಮಿಲಿ ಶಾಲೆಯಲ್ಲಿ ಕ್ರಿಸ್ತ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಹೋಲಿ ಫ್ಯಾಮಿಲಿ ಶಾಲೆಯಲ್ಲಿ ಕ್ರಿಸ್ತ ಜಯಂತಿಯನ್ನು ಭಕ್ತಿಭಾವ, ಸಂಸ್ಕೃತಿ ಹಾಗೂ ಶಿಸ್ತಿನೊಂದಿಗೆ ಆಚ–ರಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಶ್ರೀಮತಿ ನಿರ್ಮಲ ಎ.ಆರ್., ನರ್ಸಿಂಗ್ ಆಫೀಸರ್ ಹಾಗೂ ಶ್ರೀಮತಿ ಅನ್ನಪೂರ್ಣ, ನರ್ಸಿಂಗ್ ಆಫೀಸರ್ ಅವರು ಆಗಮಿಸಿದ್ದರು. ಶಾಲೆಯ ಆಡಳಿತ ಮಂಡಳಿಯ ಮುಖ್ಯಸ್ಥರಾದ ಫಾದರ್ ಜ್ಞಾನಪ್ರಕಾಶ್ ಅವರ ಉಪಸ್ಥಿತಿ ಕಾರ್ಯಕ್ರಮಕ್ಕೆ ವಿಶೇಷ ಘನತೆ ನೀಡಿತು.**




ಕಾರ್ಯಕ್ರಮದ ಆರಂಭದಲ್ಲಿ ಅತಿಥಿಗಳನ್ನು ವಿಜ್ರಮನೆಯಿಂದ ಸ್ವಾಗತಿಸಲಾಯಿತು. ಕಾರ್ಯಕ್ರಮದ ಸಂಪೂರ್ಣ ನಿರೂಪಣೆಯನ್ನು ಜ್ಯೋತಿ ಮೇಡಂ ಅವರು ಅರ್ಥಪೂರ್ಣವಾಗಿ ಮತ್ತು ಶಿಸ್ತಿನಿಂದ ನೆರವೇರಿಸಿದರು. ಹೋಲಿ ಫ್ಯಾಮಿಲಿ ಶಾಲೆಯ ಆಡಳಿತ ಮಂಡಳಿಯ ಮುಖ್ಯಸ್ಥರಾದ ಅತಿ ವಂದನೆಯ ರವರೆಂಟ್ ಫಾದರ್ ಜ್ಞಾನಪ್ರಕಾಶ್ ಅವರ ಸಂದೇಶ ಫಾದರ್ ಜ್ಞಾನಪ್ರಕಾಶ್ ಅವರು ಹೋಲಿ ಫ್ಯಾಮಿಲಿ ಶಾಲೆಯ ಸ್ಥಾಪನೆ, ಅದರ ಧ್ಯೇಯ ಮತ್ತು ಮೌಲ್ಯಗಳ ಕುರಿತು ವಿವರಿಸಿದರು. ಅವರು ಕ್ರಿಸ್ತ ಜಯಂತಿಯ ಮಹತ್ವವನ್ನು ವಿವರಿಸುತ್ತಾ, ಯೇಸು ಕ್ರಿಸ್ತನು ಬೋಧಿಸಿದ ಪ್ರೀತಿ, ತ್ಯಾಗ, ಕ್ಷಮೆ ಮತ್ತು ಸೇವೆಯ ಮೌಲ್ಯಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಮೌಲ್ಯಾಧಾರಿತ ಶಿಕ್ಷಣದ ಮೂಲಕ ಉತ್ತಮ ವ್ಯಕ್ತಿತ್ವ ಮತ್ತು ಶಿಸ್ತು ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಮುಖ್ಯ ಅತಿಥಿ ಶ್ರೀಮತಿ ನಿರ್ಮಲ ಎ.ಆರ್., ನರ್ಸಿಂಗ್ ಆಫೀಸರ್ ಕ್ರಿಸ್ತ ಜಯಂತಿ ಭಾಷಣ ಮುಖ್ಯ ಅತಿಥಿಯಾದ ಶ್ರೀಮತಿ ನಿರ್ಮಲ ಅವರು ಮಾತನಾಡಿ, ಕ್ರಿಸ್‌ಮಸ್ ಹಬ್ಬವು ಬೆಳಕು, ಆಶೆ ಮತ್ತು ಸಂತೋಷವನ್ನು ಜೀವನದಲ್ಲಿ ತರಿಸುವ ಹಬ್ಬವೆಂದು ಹೇಳಿದರು. ನರ್ಸಿಂಗ್ ಆಫೀಸರ್ ಆಗಿರುವ ತಮ್ಮ ಅನುಭವವನ್ನು ಹಂಚಿಕೊಂಡು, ಚಿಕಿತ್ಸೆ ಎಂದರೆ ಕೇವಲ ಔಷಧಿಯಲ್ಲ, ದಯೆ, ಸಹಾನುಭೂತಿ ಮತ್ತು ಕಾಳಜಿಯೂ ಆಗಿದೆ ಎಂದು ವಿವರಿಸಿದರು. ವಿದ್ಯಾರ್ಥಿಗಳು ಶಿಕ್ಷಕರಿಗೆ ಗೌರವ ನೀಡಬೇಕು, ಸ್ನೇಹಿತರೊಂದಿಗೆ ಸಹಕಾರದಿಂದ ಇರಬೇಕು ಹಾಗೂ ದುರ್ಬಲರತ್ತ ಮಾನವೀಯ ದೃಷ್ಟಿ ಹೊಂದಬೇಕು ಎಂದು ಸಲಹೆ ನೀಡಿದರು. ಸ್ವಚ್ಛತೆ, ಶಿಸ್ತು, ಸಮತೋಲ ಆಹಾರ ಮತ್ತು ಸಕಾರಾತ್ಮಕ ಮನೋಭಾವವು ಉತ್ತಮ ಆರೋಗ್ಯಕ್ಕೆ ಆಧಾರವೆಂದು ತಿಳಿಸಿದರು.

ಕ್ರಿಸ್ತ ಜಯಂತಿಯ ನಿಜವಾದ ಅರ್ಥ–ವು ಅಲಂಕಾರ ಅಥವಾ ಉಡುಗೊರೆಗಳಲ್ಲಿ ಅಲ್ಲ, ಪ್ರೀತಿ ಹಂಚಿಕೊಳ್ಳುವಲ್ಲಿ ಇದೆ ಎಂದು ಹೇಳಿದರು. ವಿದ್ಯಾರ್ಥಿಗಳು ಭವಿಷ್ಯದ ನಾಗರಿಕರಾಗಿರುವುದ–ರಿಂದ, ಆರೋಗ್ಯಕರ ಮತ್ತು ಮಾನವೀಯ ಸಮಾಜ ನಿರ್ಮಿಸುವ ಜವಾಬ್ದಾರಿ ಅವರ ಮೇಲಿದೆ ಎಂದು ಸಂದೇಶ ನೀಡಿದರು. ಈ ಶುಭ ಸಂದರ್ಭದಲ್ಲಿ ಎಲ್ಲರಿಗೂ ಕ್ರಿಸ್‌ಮಸ್ ಹಾರ್ದಿಕ ಶುಭಾಶಯಗಳನ್ನು ಕೋರಿ, ಶಾಂತಿ, ಉತ್ತಮ ಆರೋಗ್ಯ ಮತ್ತು ವಿದ್ಯಾಭ್ಯಾಸದಲ್ಲಿ ಯಶಸ್ಸನ್ನು ಹಾರೈಸಿದರು. ಮತ್ತೊಬ್ಬ ಅತಿಥಿ ಶ್ರೀಮತಿ ಅನ್ನಪೂರ್ಣ, ನರ್ಸಿಂಗ್ ಆಫೀಸರ್ ಶ್ರೀಮತಿ ಅನ್ನಪೂರ್ಣ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಕ್ರಿಸ್ತ ಜಯಂತಿಯ ಶುಭಾಶಯಗಳನ್ನು ಕೋರಿ, ಶಿಸ್ತು ಮತ್ತು ಪರಿಶ್ರಮದ ಮೂಲಕ ಭವ್ಯ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ಎಲ್ಲ ವಿದ್ಯಾರ್ಥಿಗಳಿಗೂ ಯಶಸ್ವಿ ಜೀವನವನ್ನು ಹಾರೈಸಿದರು. ಕಾರ್ಯಕ್ರಮದಲ್ಲಿ ಮಕ್ಕಳಿಂದ ವಿಶೇಷ ನಾಟಕ ಡ್ಯಾನ್ಸ್ ಇನ್ನೂ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳು ವಿಜ್ರಮಣೆಯಿಂದ ಜರುಗಿದವು ಮುಖ್ಯ ಅತಿಥಿಗಳಾದ ಶ್ರೀಮತಿ ಅನ್ನಪೂರ್ಣ ಮತ್ತು ನಿರ್ಮಲ ಎ ಆರ್ ಇವ–ರಿಗೆ ಸನ್ಮಾನ ಮಾಡಿ ಗೌರವಿಸಲಾಯಿತು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದವರು ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಮುಖ್ಯ ಗುರುಗಳಾದ ಶ್ರೀ ಮಹಬೂಬ್, ಪ್ರಾಥ–ಮಿಕ ಶಾಲೆಯ ಮುಖ್ಯ ಗುರುಗಳಾದ ಜ್ಯೋತಿ ಮೇಡಂ, ಸಂಸ್ಥೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕನ್ಯಾಸ್ತ್ರೀಯರಾದ ಸಿಸ್ಟರ್ ರೀಟಾ, ಹಾಗೂ ಸಿಸ್ಟರ್ ಸುಲೋಚನಾ ಅವರು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

BEML ನೇಮಕಾತಿ 2026–50 ಅಧಿಕಾರಿ, ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ BEML ನೇಮಕಾತಿ 2025: 50 ಅಧಿಕಾರಿ, ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಭಾರತ್ ಅರ್ಥ್ ಮೂವರ್ಸ್ ಲಿಮಿಟೆಡ್ ಡಿಸೆಂಬರ್ 2025 ರ BEML ಅಧಿಕೃತ ಅಧಿಸೂಚನೆಯ ಮೂಲಕ ಅಧಿಕಾರಿ, ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬಿಲಾಸ್ಪುರ್ ?ಛತ್ತೀಸ್‌ಗಢ, ದೆಹಲಿ ?ನವದೆಹಲಿ, ಮೈಸೂರು, ಬೆಂಗಳೂರು ಕರ್ನಾಟಕ, ಪಾಲಕ್ಕಾಡ್ ಕೇರಳ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07–ಜನವರಿ–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಬಿಇಎಂಎಲ್ ನೇಮಕಾತಿ ಸಂಸ್ಥೆ ಭಾರತ್ ಅರ್ಥ್ ಮೂವರ್ಸ್ ಲಿಮಿಟೆಡ್ ಪೋಸ್ಟ್ ಹೆಸರು ಅಧಿಕಾರಿ, ಮ್ಯಾನೇಜರ್ 50 ಹುದ್ದೆಗಳ ಖಾಲಿ ಹುದ್ದೆಗಳು ಅರ್ಹತಾ ಡಿಪ್ಲೊಮಾ, ಸಿಎ, ಐಸಿಡಬ್ಲ್ಯೂಎ, ಸಿಎಂಎ, ಪದವಿ, ಬಿಇ/ ಬಿ.ಟೆಕ್, ಪದವಿ, ಎಂಎ, ಎಂ–ಎಸ್‌ಡಬ್ಲ್ಯೂ, ಎಂಬಿಎ, ಪಿಜಿ ಪದವಿ/ ಡಿಪ್ಲೊಮಾ, ಸ್ನಾತಕೋತ್ತರ ಪದವಿ ಅಧಿಕೃತ ವೆಬ್‌ಸೈಟ್: bemlindia.in ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 07–ಜನವರಿ–2026

## ಕಾರುಣ್ಯಾಶ್ರಮದಲ್ಲಿ ಯದ್ದಲ್ಲದೊಡ್ಡಿ ಶ್ರೀಗಳಿಂದ ಪತ್ರಕರ್ತರುಗಳಿಗೆ ಶುಭಾಶೀರ್ವಾದ–ಶುದ್ಧ ಸಮಾಜ ನಿರ್ಮಾಣವಾಗುವುದರಲ್ಲಿ ಪತ್ರಕರ್ತರ ಪಾತ್ರ ವಿಶೇಷವಾದುದು–ಮಹಾಲಿಂಗ ಮಹಾ ಸ್ವಾಮಿಗಳು

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸುವರ್ಣ ಗಿರಿ ವಿರಕ್ತ ಮಠ ಯದ್ದಲದೊಡ್ಡಿ ಶ್ರೀ ಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಅಕ್ಷಯ ಆಹಾರ ಜೋಳಿಗೆ ಸೇವಾ ಟ್ರಸ್ಟ್ ಇವರುಗಳ ವತಿಯಿಂದ ಹಮ್ಮಿಕೊಂಡಿದ್ದ ಸಿಂಧನೂರು ತಾಲೂಕ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಯಲ್ಲಿ ಆಯ್ಕೆಯಾದ ನೂತನ ಪದಾಧಿಕಾರಿಗಳ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾದ ಶರಣಪ್ಪ ಗೋನಾಳ ಪ್ರಧಾನ ಕಾರ್ಯದರ್ಶಿಗಳಾಗಿ ಆಯ್ಕೆಯಾದ ಅಮರೇಶ ಅಲಬನೂರು ಖಜಾಂಚಿಗಳಾಗಿ ಆಯ್ಕೆಯಾದ.**

ಚಂದ್ರಶೇಖರ ಬೆನ್ನೂರು ಉಪಾಧ್ಯಕ್ಷರುಗಳಾಗಿ ಆಯ್ಕೆಯಾದ ಯಮನಪ್ಪ ಪವಾರ ಹಾಗೂ ದುರುಗೇಶ ಮತ್ತು ಕಾರ್ಯಕಾ–ರಿಣಿ ಸಮಿತಿ ಸದಸ್ಯರುಗಳಾಗಿ ಆಯ್ಕೆಯಾದ ವೀರೇಶ ಗಡ್ಡಿಮಾಳ ಚನ್ನಬಸವ ಕಟ್ಟಿಮನಿ ಇವರುಗಳಿಗೆ ಯದ್ದಲದೊಡ್ಡಿ ಸುವರ್ಣ ಗಿರಿ ವಿರಕ್ತಮಠದ ಪೀಠಾಧಿಪತಿಗಳಾದ ಶ್ರೀ ಮ.ನಿ.ಪ್ರ. ಮಹಾಲಿಂಗ ಮಹಾಸ್ವಾಮಿಗಳು




ಗೌರವಿಸಿ ಶುಭಾಶೀರ್ವಾದ ಪ್ರಾಪ್ತಿಸಿ ಒಳಬಳ್ಳಾರಿ ಲಿಂಗಕ್ಕೆ ಶ್ರೀ ಚನ್ನಬಸವ ಮಹಾಶಿವಯೋಗಿಗಳ ಭಾವಚಿತ್ರಗಳನ್ನು ನೆನಪಿನ ಕಾಣಿಕೆಯಾಗಿ ವಿತರಿಸಿ ಆಶೀರ್ವದಿಸಿದರು. ಶುದ್ಧ ಸಮಾಜ ನಿರ್ಮಾಣವಾಗುವುದರಲ್ಲಿ ಪತ್ರಕರ್ತರ ಪಾತ್ರ ವಿಶೇಷವಾದುದು ಸಮಾಜದಲ್ಲಿನ ಅದೆಷ್ಟೋ ಅನ್ಯಾಯ ಭ್ರಷ್ಟಾಚಾರ ಅವ್ಯವಸ್ಥೆಯ ಬಗ್ಗೆ ವರದಿ ಮಾಡಿ ಸರ್ಕಾರದ ಗಮನಕ್ಕೆ ತಂದು ಪರಿಹರಿಸುವಲ್ಲಿ ಪತ್ರಕರ್ತರ ಸೇವೆ ಶ್ಲಾಘನೀಯ ಮತ್ತು ನಮ್ಮ ಈ ಕಾರುಣ್ಯ ಆಶ್ರಮದ ಸೇವೆಯನ್ನು ನಾಡಿಗಳದೆ ದೇಶದ ಮಟ್ಟಿಗೆ ತೋರಿಸಿಕೊಟ್ಟಿರುವ ಕೀರ್ತಿ ಪತ್ರಕರ್ತರಿಗೆ ಸಲ್ಲುತ್ತದೆ. ಪತ್ರಕರ್ತರ ದಿಟ್ಟತನ ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ತಾವುಗಳು ಸಮಾಜದ ಬಹುದೊಡ್ಡ ಆಸೆಯಾಗಿದ್ದೀರಿ.

ನಮಗೆ ಕಾರುಣ್ಯಾ ಶ್ರಮಕ್ಕೆ ಸ್ವಂತ ಜಾಗ ಹಾಗೂ ಸರ್ಕಾರದ ಅನುದಾನವನ್ನು ಒದಗಿಸುವಲ್ಲಿ ತಾವುಗಳು ಪ್ರಾಮಾಣಿಕವಾದ ಪ್ರಯತ್ನ ಮಾಡುತ್ತಿದ್ದೀರಿ. ಯಾವಾಗಲೂ ನಿಮ್ಮಗಳ ಸಹಾಯ ಸಹಕಾರ ಮಾರ್ಗದರ್ಶನವೇ ಕಾರುಣ್ಯ ಕುಟುಂಬದ ಸೇವೆಗೆ ಸ್ಪೂರ್ತಿಯಾಗಿದೆ ಎಂದು ಯದ್ದಲದೊಡ್ಡಿ ಸುವರ್ಣಗಿರಿ ವಿರಕ್ತಮಠದ ಮಹಾಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ಈ ಕಾರ್ಯಕ್ರಮದಲ್ಲಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಶರಣಪ್ಪ ಗೋನಾಳ ಮಾತನಾಡಿ ಶ್ರಿಗಳ ಆಶೀರ್ವಾದವೇ ನಮಗೆ ಶ್ರೀರಕ್ಷೆ ನಿಸ್ವಾರ್ಥತೆಯ ಪ್ರಾಮಾಣಿಕ ಸೇವೆ ಮಾಡುವಂತಹ ಕಾರುಣ್ಯ ಆಶ್ರಮದ ಸೇವೆಯನ್ನು ಸಾರ್ವಜನಿಕರಿಗೆ ಸರ್ಕಾರಕ್ಕೆ ತಲುಪಿಸುವಂತಹ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ಈ ಕಾರುಣ್ಯ ಆಶ್ರಮವು ಸಿಂಧನೂರಿನ ಕರುಣೆಯ ಕಾರುಣ್ಯ ಕುಟುಂಬವಾಗಿರುವುದು ಪ್ರತಿಯೊಬ್ಬ ಪತ್ರಕರ್ತರ ಪ್ರೀತಿಗೆ ಪಾತ್ರವಾಗಿದೆ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ ಮ–ರಿಯಪ್ಪ. ಜ್ಯೋತಿ. ಮತ್ತು ಆಶ್ರಮದಲ್ಲಿನ ಎಲ್ಲಾ ಹಿರಿಯರು ವಯಸ್ಕರ ಬುದ್ಧಿಮಾಂದ್ಯರು ಪತ್ರಕರ್ತರುಗಳಿಗೆ ಶುಭ ಹಾರೈಸಿದರು.

## ಅದ್ದೂರಿಯಾಗಿ ಜರುಗಿದ ಅಯ್ಯಪ್ಪ ಸ್ವಾಮಿ ಮಂಡಲ ಪೂಜೆ ಹಾಗೂ ಭಾವಚಿತ್ರ ಮೇರವಣಿಗೆ

❏ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಡಿ 24 , ಪಟ್ಟಣದ ಅಯ್ಯಪ್ಪಸ್ವಾಮಿ ದೇವಸ್ಥಾನದ 9 ನೇ ವಾರ್ಷಿಕೋತ್ಸವ ಹಾಗೂ ಮಂಡಲ ಪೂಜೆ ನಿಮತ್ಯ ಮಾಲಾಧಾರಿಗಳು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಅಯ್ಯಪ್ಪಸ್ವಾಮಿ ಉತ್ಸವ ಮೂರ್ತಿ ಮತ್ತು ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಿದರು. ಸುಪ್ರಭಾತದೊಂದಿಗೆ ಆರಂಭಗೊಂಡ ಪೂಜಾ ಕೈಂಕರ್ಯಗಳು ನೈರ್ಮಲ್ಯ ದರ್ಶನಂ, ಮಹಾಗಣಪತಿ ಹೋಮ,ಅಯ್ಯಪ್ಪಸ್ವಾಮಿ ಮೂರ್ತಿ ಸೇರಿದಂತೆ ದೇವಸ್ಥಾನದ ಉಪ ದೇವತೆಗಳ ಕಳಸಾಭಿಷೇಕಂ ನೆರವೇರಿಸಿದ ನಂತರದಲ್ಲಿ ಈಶ್ವರ ದೇವಸ್ಥಾನದಲ್ಲಿ ತೆರೆದ ಅಲಂಕೃತ ವಾಹನದಲ್ಲಿ ಭಾವಚಿತ್ರ ಪ್ರತಿಷ್ಠಾಪಿಸಿ, ಉತ್ಸವ ಕರ್ಪೂರದಾರತಿ ಬೆಳಗುತ್ತ ಮೆರವಣಿಗೆಗೆ ಮೂರ್ತಿಯೊಂದಿಗೆ ಚಾಲನೆ ನೀಡಲಾಯಿತು.**



ಈಶ್ವರ ದೇವಸ್ಥಾನದಿಂದ ಆರಂಭಗೊಂಡ ಮೆರವಣಿಗೆ ಹಳೆಬಸ್ ನಿಲ್ದಾಣ, ಹಳೆ ವಿಜಯ ಬ್ಯಾಂಕ್ ರಸ್ತೆ, ಗಡಿಯಾರ ವೃತ್ತ, ಅಂಚೆ ಕಚೇರಿ, ಬಸ್ ನಿಲ್ದಾಣ ಮಾರ್ಗವಾಗಿ ಅಯ್ಯಪ್ಪಸ್ವಾಮಿ ದೇವಸ್ಥಾನಕ್ಕೆ ಸಾಗಿ ಬಂದಿತು.ನಂತರದಲ್ಲಿ ಅನ್ನಸಂತರ್ಪಣೆ ನೆರವೇರಿತು.ಸಂಜೆ ದೀಪಾರಾಧನೆ, ಅಯ್ಯಪ್ಪಸ್ವಾಮಿ 18 ಮೆಟ್ಟಿಲು ಪಡಿ ಪೂಜೆ, ಪುಷ್ಪಾಭಿಷೇಕ,ಪಾನಕ ನೈವೇದ್ಯ ಅರ್ಪಿಸಿ ಹ–ರಿವರಾಸನಂ ಮೂಲಕ ಪೂಜೆಗಳಿಗೆ ವಿದಾಯ ಹೇಳಲಾಯಿತು. ಕೇರಳ ಮೂಲದ ಪ್ರಶಾಂತ್ ನಂಬೊದರಿ,ನೇತೃತ್ವದಲ್ಲಿ ಸಿದ್ರಾಮು ಗುರುಸ್ವಾಮಿ ನಗರಗುಂಡ ಅವರ ಸಹಕಾರದಲ್ಲಿ ಪೂಜಾ ಕಾರ್ಯಗಳು ನಡೆದವು. ಅಯ್ಯಪ್ಪಸ್ವಾಮಿ ದೇವಸ್ಥಾನದ ಸಮಿತಿ ಟ್ರಸ್ಟ ಅಧ್ಯಕ್ಷ ಮನೋಹರ ರೆಡ್ಡಿ ಮುನ್ನೂರು,ಕಾರ್ಯದರ್ಶಿ ಈರಣ್ಣ ಗುರುಸ್ವಾಮಿ, ಖಜಾಂಚಿ ಬಾಲನ್, ಮಾರೆಪ್ಪ ನಾಯಕ, ರಾಜೇಶ ಮಾಣಿಕ್ ಸೇರಿದಂತೆ ಎಲ್ಲಾ ಭಕ್ತದಿಗಳು ಭಾಗವಹಿಸಿದ್ದರು.

## ಮಸ್ಕಿ ತಾಲೂಕಿನ ಹಾಲಾಪುರ ಗ್ರಾಪಂ ವಿಭಜಿಸಿ, ಹೊಸ ಗ್ರಾಪಂ ರಚಿಸುವಂತೆ ಗ್ರಾಮಸ್ಥರ ಒತ್ತಾಯ



❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮಸ್ಕಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಾಲಾಪುರ ಗ್ರಾಮ ಪಂಚಾಯತಿ ತಾಲೂಕಿನಲ್ಲಿಯೇ ಅತಿದೊಡ್ಡ ಗ್ರಾಪಂ ಆಗಿದೆ ಅದಕ್ಕೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿದ್ದು ಆದ್ದರಿಂದ ಹಾಲಾಪುರು ಗ್ರಾಪಂ ವಿಭಜಿಸಿ, ಹೊಸ ಗ್ರಾಪಂ ರಚಿಸಿ ಇಲ್ಲದಿದ್ದರೆ ಮುಂಬರುವ ಚುನಾವಣೆಗಳನ್ನು ಬಹಿಷ್ಕ–ರಿತ್ತೇವೆ ಎಂದು ಗ್ರಾಮಸ್ಥರು ಒತ್ತಾಯಿಸಿದರು.**

ಮಸ್ಕಿ ಪಟ್ಟಣದ ತಾಲೂಕು ಪಂಚಾಯತ್ ಕಚೇರಿಯಲ್ಲಿ ತಾಪಂ ಇಒ ಅಮರೇಶ ಯಾದವ ಅವರಿಗೆ ಮಂಗಳವಾರ ಮನವಿ ಪತ್ರ ಸಲ್ಲಿಸಿದರು ಮಸ್ಕಿ ತಾಲೂಕಿನ ಹಾಲಾಪುರ ಗ್ರಾಮ ಪಂಚಾಯತಿಯು ಒಟ್ಟು 26 ಸದಸರನ್ನು ಒಳಗೊಂಡಿದ್ದು, 16 ಗ್ರಾಮ, ಕ್ಯಾಂಪಗಳನ್ನು , ಅಂದಾಜು 18000 ಸಾವಿರ ಜನಸಂಖ್ಯೆಯನ್ನು ಹೊಂದಿದ್ದು .ಭೌಗೋಳಿಕವಾಗಿ ವಿಶಾಲವಾಗಿರುತ್ತದೆ.ಕೆಲವು ಗ್ರಾಮಗಳಿಗೆ ಬಸ್ ಸೌಕರ್ಯ ಇರುವುದಿಲ್ಲ,ಗ್ರಾಮ ಪಂಚಾಯತಿ ಕೆಲಸ ಕಾರ್ಯಗಳಿಗೆ ತುಂಬಾ ತೊಂದರೆಯಾಗಿರುತ್ತದೆ,ಆಡಳಿತಾತ್ಮಕ ಹಿತದೃಷ್ಟಿಯಿಂದ ಹಾಲಾಪೂರ ಗ್ರಾಪಂ ಯನ್ನು ವಿಭಜಿಸಿ ಹೊಸ ಗ್ರಾಪಂ ಮಾಡಲು ಅವಶ್ಯಕತೆ ಇದೆ ಅದುಕೊಸ್ಕರ ಮಾಡಬೇಕು ಇಲ್ಲವಾದರೆ ಮುಂಬರುವ ಚುನಾವಣೆಯನ್ನು ಬಹಿಷ್ಕಾರ ಮಾಡಲಾಗುವುದು, ಈ ಬಗ್ಗೆ ತುಗ್ಗಲದಿನ್ನಿ, ಶಂಕರನಗರಕ್ಯಾಂಪ, ಹಿರೆಕಡಬೂರು, ಹಂಚಿನಾಳ, ಎಸ್ ರಾಮಲದಿನ್ನಿ ಯಿಂದ ಗ್ರಾಪಂ ಗೆ ಹನ್ನೆರಡು ಕಿಲೊಮೀಟರ್ ಇದ್ದು ಇದರಿಂದ ಸಕಾಲಕ್ಕೆ ಪಂಚಾಯತಿಗೆ ಬರಲು ಆಗುತ್ತಿಲ್ಲ, ಸರಿಯಾದ ವ್ಯವಸ್ಥೆ ಇಲ್ಲ, ಮಹಿಳೆಯರು, ವೃದ್ಧರು ಪಂಚಾಯತ ಕೆಲಸಕ್ಕೆ ಬರಲು ಆಗದೆ ಕೆಲಸಕಾರ್ಯಗಳಿಂದ ದೂರ ಉಳಿಯುವ ತಾಪತ್ರಯ ಎದ್ದು ಕಾಣುತ್ತದೆ ಎಂದು ಅನೇಕ ಮಹಿಳೆಯರು, ಗ್ರಾಮಸ್ಥರು ಸುದ್ದಿಯೊಂದಿಗೆ ತಮ ನೋವು,ಅಳಲನ್ನು ಹಂಚಿಕೊಂಡಿದೆ.

ನಂತರ ಗ್ರಾಪಂ ವಿಭಜಿಸಿ ಹೊಸ ಪಂಚಾಯತ ಮಾಡುವಂತೆ ಒತ್ತಾಯಿಸಿ ಮನವಿ ಪತ್ರವನ್ನು ಗ್ರಾಪಂ ಪಿಡಿಒ ವಿಶ್ವನಾಥ ಹೂಗಾರ,ತಾಪಂ ಇಒ ಅಮರೇಶ ಯಾದವ,ಮಾನ್ಯ ತಹಶಿಲ್ದಾರರಿಗೆ,ಶಾಸಕರ ಆಪ್ತ ಕಾರ್ಯದರ್ಶಿ ಶರಣೆಗೌಡ ಅವರಿಗೆ ಗ್ರಾಪಂ ವ್ಯಾಪ್ತಿಯ ಮುಖಂಡರು,ನಾಗರಿಕರು,ಗ್ರಾಪಂ ಸದಸ್ಯರು ಮನವಿ ಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಕೆಡಿಪಿ ಸದಸ್ಯ ಕರಿಯಪ್ಪ, ಬಿ. ಕರಿಯಪ್ಪ, ಕೃಷಿ ಪ್ರಾಥಮಿಕ ಕೇಂದ್ರ ಹಾಲಾಪುರ ಅಧ್ಯಕ್ಷ ಜಗದೀಶಸ್ವಾಮಿ, ಯರ್‍ರಿ ತಾತ ಪಾಟೀಲ್, ಬಸ್ಸಪ್ಪ ಜೆ, ಬಸವರಾಜ್ ಆರ್, ಗ್ಯಾರಂಟಿ ಸಮಿತಿ ಸದಸ್ಯ ಪೌಲರಾಜ್, ರವಿ ದೇಸಾಯಿ, ಬಾಲ ಸ್ವಾಮಿ, ಬಸ್ಸಪ್ಪ ನಾಯಕ, ಸಿದ್ದಾರ್ಥ್ ಪೊಲೀಸ್ ಪಾಟೀಲ್ , ಅಮರೇಶ ಮಲ್ಲಟ, ಅಮರೇಶ್ ಕಡಬುರು ಸೇರಿದಂತೆ ಇನ್ನಿತರರು ಇದ್ದರು

## ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆ ಸಾಲ ಮೇಳ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 23 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯಿಂದ ಲೀಡ್ ಬ್ಯಾಂಕ್ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಅವರ ಸಹಯೋಗದೊಂದಿಗೆ ಪಿಎಂ ಬೀದಿ ಮಾರಾಟಗಾರರ ಸ್ವಾವಲಂಬಿ ನಿಧಿ (ಪಿಎಂ ಸ್ವನಿಧಿ) ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆಯಡಿ ಸಾಲ ಮೇಳವು ಡಿಸೆಂಬರ್ 23ರಂದು ಯಶಸ್ವಿಯಾಗಿ ನಡೆಯಿತು.**

ರಾಯಚೂರು ಮಹಾನಗರ ಪಾಲಿಕೆಯ ಅಧಿಕಾರಿಗಳು, ಲೀಡ್ ಬ್ಯಾಂಕ್ ಹಾಗೂ ಎಸ್‌ಬಿಐ ಅಧಿಕಾ–ರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತ–ರಿದ್ದು, ಸರ್ಕಾರದ ಕಲ್ಯಾಣ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಬೀದಿ ವ್ಯಾಪಾರಿಗಳಿಗೆ ಪ್ರೋತ್ಸಾಹಿಸಿದರು. ಸರ್ಕಾರದ ಮಹತ್ವದ ಯೋಜನೆಯ ಬಗ್ಗೆ ರಾಯಚೂರು ಜನತೆಗೆ ಅರಿವು ಮೂಡಿಸಲು ನಗರದ ಎಸ್‌ಬಿಐ ಕೇಂದ್ರ ಬ್ಯಾಂಕ್‌ನಲ್ಲಿ ಸಂಘಟಿಸಿದ್ದ ಕಾರ್ಯಕ್ರಮದಲ್ಲಿ



200ಕ್ಕೂ ಹೆಚ್ಚು ಬೀದಿ ಬದಿ ವ್ಯಾಪಾರಿಗಳು ಹಾಗೂ ಸಣ್ಣ ವ್ಯಾಪಾರಿಗಳು ಸೇರಿದ್ದರು. ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಸ್ವಾವಲಂಬಿ ಜೀವನೋಪಾಯಕ್ಕೆ ಅಗತ್ಯವಾದ ಆರ್ಥಿಕ ಸಹಾಯ ಒದಗಿಸುವ ಉದ್ದೇಶದೊಂದಿಗೆ ಹಮ್ಮಿಕೊಂಡ ಈ ಮೇಳಕ್ಕೆ ಬೆಳಿಗ್ಗೆಯಿಂದಲೇ ಉತ್ತಮ ಸ್ಪಂದನೆ ದೊರೆತಿದ್ದು, ಈ ಮೇಳದಿಂದ ನಮ್ಮಲ್ಲಿ ಉತ್ಸಾಹ ಮೂಡಿದೆ.

ರಾಯಚೂರು ಮಹಾನಗರ ಪಾಲಿಕೆಯಿಂದ ಮುಂದಿನ ದಿನಗಳಲ್ಲಿಯು ಸಹ ಬೀದಿ ವ್ಯಾಪಾರಿಗಳ ಆರ್ಥಿಕ ಶಕ್ತೀಕರಣಕ್ಕಾಗಿ ಬ್ಯಾಂಕ್‌ಗಳು ಹಾಗೂ ವಿವಿಧ ಇಲಾಖೆಗಳೊಂದಿಗೆ ಸಮನ್ವಯದಲ್ಲಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದ್ದೇವೆ ಎಂದು ತಿಳಿಸಿದರು. ಬೀದಿ ಬದಿ ಮಾರಾಟಗಾರರ ಸ್ವಾವಲಂಬಿ ನಿಧಿ (ಪಿಎಂ ಸ್ವನಿಧಿ) ಬೀದಿ ವ್ಯಾಪಾರಿಗಳಿಗೆ ವಿಶೇಷ ಮೈಕ್ರೋ ಕ್ರೆಡಿಟ್ ಯೋಜನೆಯಡಿ 50,000 ರೂ ವರೆಗೆ ಭದ್ರತೆ ರಹಿತ ಸಾಲ, ನಿಯಮಿತ ಪಾವತಿಗಳ ಮೇಲೆ ಶೇ.7 ಬಡ್ಡಿ ಸಬ್ಸಿಡಿಗೆ ಅವಕಾಶವಿದ್ದು, ರಾಯಚೂರು ಜಿಲ್ಲೆಯಲ್ಲಿನ ಅರ್ಹ ಎಲ್ಲ ಬೀದಿ ಬದಿ ವ್ಯಾಪಾರಸ್ಥರು ಈ ಬಗ್ಗೆ ಮಾಹಿತಿ ಪಡೆದುಕೊಂಡು ಸಾಲ ಸೌಲಭ್ಯ ಪಡೆದುಕೊಳ್ಳುವಂತೆ ಆಯುಕ್ತರು ಮನವಿ ಮಾಡಿದರು.

ಸ್ಥಳದಲ್ಲೇ ಮಾಹಿತಿ: ಮೇಳದಲ್ಲಿ ಬ್ಯಾಂಕ್ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದು ಫಲಾನುಭವಿಗಳಿಗೆ ಯೋಜನೆಯ ವಿವರಗಳು, ಅರ್ಹತೆ, ದಾಖಲೆಗಳು ಹಾಗೂ ಸಾಲ ಪ್ರಕ್ರಿಯೆಗಳ ಕುರಿತು ಸ್ಥಳದಲ್ಲಿಯೇ ಮಾಹಿತಿ ನೀಡಿದರು. ಈ ವೇಳೆ, ಸುಮಾರು 50 ಫಲಾನುಭವಿಗಳಿಗೆ ಸ್ಥಳದಲ್ಲಿಯೇ ಸಾಲ ಮಂಜೂರಿ ಮಾಡಿ ದೃಢೀಕರಿಸಲಾಯಿತು. ದಿನಾಂಕ 23ರಂದು ಸ್ವೀಕೃತಿಯಾದ ಎಲ್ಲಾ ಅರ್ಜಿಗಳಿಗೆ ದಿನಾಂಕ 24ರೊಳಗೆ ಸಾಲ ಮಂಜೂರಿ ಮಾಡಲಾಗುವುದು ಎಂದು ಎಸ್‌ಬಿಐ ಪ್ರಾದೇಶಿಕ ವ್ಯವಸ್ಥಾಪಕರಾದ ಸೀತಾಬಾಯಿ ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ಪಾಲಿಕೆ ಅಧಿಕಾ–ರಿಗಳಾದ ಶ್ರೀ ಕೃಷ್ಣ ಶಾವಂತಗೇರಿ, ಸಂತೋಷ ರಾಣಿ, ಸುರೇಶ ವಿಭೂತಿಮಠ್, ರಸೂಲ್, ಲೀಡ್ ಬ್ಯಾಂಕ್ ಮ್ಯಾನೇಜರ್ ಸುಧೀಂದ್ರ, ಎಸ್.ಬಿ.ಐ ಬ್ಯಾಂಕ್ ಮ್ಯಾನೇಜರ್ ಆನಂದ ವಾಲಿ ಸೇರಿದಂತೆ ಇತರರು ಇದ್ದರು.

## ಮಸ್ಕಿ ತಾಲ್ಲೂಕಿನ ನೀರಾವರಿ ಮಹಾಯೋಜನೆಗೆ ಹಸಿರು ನಿಶಾನೆ ನಾರಾಯಣಪುರ ಬಲದಂಡೆ ಕಾಲುವೆ ಯೋಜನೆಗೆ ರೂ.990 ಕೋಟಿ ಆಡಳಿತಾತ್ಮಕ ಅನುಮೋದನೆ



**ಪಾಮನಕಲ್ಲೂರ 5ಎ ಕಾಲುವೆಗೆ 990 ಕೋಟಿ ಕೊಟ್ಟ ಸಿದ್ದರಾಮಯ್ಯನವರಿಗೆ ಅಭಿನಂದನೆಗಳು. ಹಲವಾರು ದಶಕಗಳಿಂದ 108 ಗ್ರಾಮಗಳ 10800 ಎಕರೆ ರೈತರ ಜಮೀನಿಗೆ ನೀರುಣಿಸುವ ನೀರಾವರಿ ಯೋಜನೆಗಾಗಿ ನಾವು ಈ ಹಿಂದೆ ನಡೆಸಿದ ನೀರಾವರಿ ಹೋರಾಟಕ್ಕೆ ಇಂದು ಪ್ರಾಕ್ಟಿಕಲ್ ಆಗಿ ಜಯ ದೊರೆತಿದೆ. ಎರಡು ವರ್ಷಗಳ ಹಿಂದೆ ಎನ್‌ಆರ್‌ಬಿಸಿ 5ಎ ನಾಲಯೋಜನೆಯನ್ನು ತಮ್ಮ ಬಜೆಟ್ ಭಾಷಣದಲ್ಲಿ ಸಿದ್ದರಾಮಯ್ಯನವರು ಘೋಷಿಸಿದ್ದರು. ಆದರೆ, ಅದಕ್ಕೆ ಹಣಕಾಸಿನ ಅನುಮೋದನೆ ಇರಲಿಲ್ಲ. ಆದರೆ ಬೆಳಗಾವಿಯಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಉತ್ತರ ಕರ್ನಾಟಕಕ್ಕೆ 3500 ಕೋಟಿ ವಿಶೇಷ ಪ್ಯಾಕೇಜ್ ಹಣ ಘೋಷಣೆ ಮಾಡಿದ್ದಲ್ಲದೆ, ಆ ಪೈಕಿ 990 ಕೋಟಿ ಹಣವನ್ನು ಎನ್‌ಆರ್‌ಬಿಸಿ 5ಎ ಕಾಲುವೆಗೆ ನೀಡಿದ್ದು ಅತ್ಯಂತ ಸಂತೋಷದ ಸಮಾಚಾರವಾಗಿದೆ. ಈ ಕಾರಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹಾಗೂ ಜಲಸಂಪನ್ಮೂಲ ಸಚಿವರಾದ ಡಿಕೆ ಶಿವಕುಮಾರ್ ಅವರಿಗೆ ಎನ್‌ಆರ್‌ಬಿಸಿ 5ಎ ನಾಲ ಸಂಯುಕ್ತ ಹೋರಾಟ ಸಮಿತಿ ವತಿಯಿಂದ ಅಭಿನಂದನೆಗಳನ್ನು ತಿಳಿಸಲಾಗಿದೆ. ಕೂಡಲೇ, ಕೃಷ್ಣ ಭಾಗ್ಯ ಜಲ ನಿಗಮದ ಅಧಿಕಾರಿಗಳು ಹಾಗೂ ನಮ್ಮ ಭಾಗದ ಶಾಸಕರು, ಕಾಲುವೆ ನಿರ್ಮಾಣಕ್ಕೆ ಮುಂದಾಗ ಬೇಕೆಂದು ಈ ಮೂಲಕ ಒತ್ತಾಯಿಸಲಾಗಿದೆ. ಈ ಮಹತ್ವಕಾಂಕ್ಷೆಯ ನೀರಾವರಿ ಹೋರಾಟದಲ್ಲಿ ಸಾಕಷ್ಟು ಪರಿಶ್ರಮ ಹಾಕಿ ಹೋರಾಟವನ್ನು ಮುನ್ನಡೆಸಿದ ಎಲ್ಲ ಮುಖಂಡರಿಗೆ ಹಾಗೂ ಕಾರ್ಯಕರ್ತರಿಗೆ ವಿಶೇಷವಾಗಿ ಅಮೀನಗಡ ವಟಗಲ್ ಪಾಮನಕಲ್ಲೂರ ರೈತರಿಗೆ ಈ ಮೂಲಕ ಕ್ರಾಂತಿಕಾರಿ ಅಭಿನಂದನೆಗಳನ್ನು ಸಲ್ಲಿಸಲಾಗಿದೆ**
**ಆರ್. ಮಾನಸಯ್ಯ, ಸಂಚಾಲಕರು, ಎನ್‌ಆರ್‌ಬಿಸಿ 5ಎ ಕಾಲುವೆ ಸಂಯುಕ್ತ ಹೋರಾಟ ಸಮಿತಿ, ಪಾಮನಕಲ್ಲೂರ**



**ನಾರಾಯಣಪುರ ಬಲದಂಡೆ ಕಾಲುವೆ ಆಧಾರಿತ ನೀರಾವರಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ದೊರೆತಿ–ರುವುದು ಮಸ್ಕಿ ತಾಲ್ಲೂಕಿನ ರೈತರಿಗೆ ಹೊಸ ಬದುಕಿನ ಆಶಾಕಿರಣವಾಗಿದೆ. ಮಲ್ಲಿಕಾರ್ಜುನ ಯದ್ದಲದ್ದಿನಿ. ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಮಸ್ಕಿ**

**ನಾರಾಯಣಪುರ ಬಲದಂಡೆ ಕಾಲುವೆ ನೀರನ್ನು ಮಸ್ಕಿ ಪ್ರದೇಶಕ್ಕೆ ತಲುಪಿಸುವುದು ನಮ್ಮ ಬಹುಕಾಲದ ಬೇಡಿಕೆಯಾಗಿತ್ತು. ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿರುವುದು ಸ್ವಾಗತಾರ್ಹ. ಈಗ ಯೋಜನೆ ವಿಳಂಬವಿಲ್ಲದೆ ಜಾರಿಯಾಗಬೇಕು. ಭೂಸ್ವಾಧೀನ ಮತ್ತು ತಾಂತ್ರಿಕ ಪ್ರಕ್ರಿಯೆಗಳನ್ನು ಶೀಘ್ರ ಮುಗಿಸಲು ಒತ್ತಾಯಿಸಲಾಗುವುದು.**
**ಹುಸೇನಬಾಷ ಗುರುಗುಂಟಿ ರೈತ ಅಮೀನಗಡ**



**ಮಸ್ಕಿ ತಾಲ್ಲೂಕು ದಶಕಗಳಿಂದ ನೀರಿನ ಕೊರತೆಯಿಂದ ನರಳುತ್ತಿದೆ. ಪಾಮನಕಲ್ಲೂರು ಸೇರಿದಂತೆ ಅನೇಕ ಗ್ರಾಮಗಳು ಮಳೆಯನ್ನೇ ಅವಲಂಬಿಸಿ ಕೃಷಿ ನಡೆಸುವ ಸ್ಥಿತಿಯಲ್ಲಿವೆ. ರೂ.990 ಕೋಟಿ ವೆಚ್ಚದ ಈ ಯೋಜನೆ ಅನುಷ್ಠಾನಗೊಂಡರೆ ರೈತರ ಬದುಕು ಸಂಪೂರ್ಣವಾಗಿ ಬದಲಾಗಲಿದೆ. ಇದು ಕೇವಲ ನೀರಾವರಿ ಯೋಜನೆ ಅಲ್ಲ, ತಾಲ್ಲೂಕಿನ ಆರ್ಥಿಕ ಪುನರ್ ನಿರ್ಮಾಣದ ಹೆಜ್ಜೆ.**
**ಬಸನಗೌಡ ತುರ್ವಿಹಾಳ, ಶಾಸಕರು ಮಸ್ಕಿ.**

❏ ನೈಜ್ಯ ದೆಸೆ ನ್ಯೂಸ್

**ಕವಿತಾಳ: ರಾಯಚೂರು ಜಿಲ್ಲೆಯ ಮಸ್ಕಿ ತಾಲ್ಲೂಕಿನ ಪಾಮನಕಲ್ಲೂರು ಸೇರಿದಂತೆ ಬರಪೀಡಿತ ಪ್ರದೇಶಗಳಿಗೆ ನಾರಾಯಣಪುರ ಬಲದಂಡೆ ಕಾಲುವೆಯಿಂದ ನೀರಾವರಿ ಸೌಲಭ್ಯ ಕಲ್ಪಿಸುವ ಬಹುಕಾಲದ ಕನಸು ಇದೀಗ ಸಾಕಾರವಾಗುವ ಹಂತಕ್ಕೆ ಬಂದಿದೆ. ಸುಮಾರು ರೂ.990.00 ಕೋಟಿ ಅಂದಾಜು ವೆಚ್ಚದ**



**ಮಹತ್ವಾಕಾಂಕ್ಷಿ ನೀರಾವರಿ ಯೋಜನೆಗೆ ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ.**

ಈ ಯೋಜನೆಯಡಿ ನಾರಾಯಣಪುರ ಜಲಾಶಯದ ಬಲದಂಡೆ ಕಾಲುವೆಯಿಂದ ನೀರನ್ನು ಮಸ್ಕಿ ತಾಲ್ಲೂಕಿನ ಪಾಮನಕಲ್ಲೂರು, ಸುತ್ತಮುತ್ತಲ ಗ್ರಾಮಗಳು ಹಾಗೂ ಇತರ ಕೃಷಿ ಪ್ರದೇಶಗಳಿಗೆ ಹರಿಸುವ ಉದ್ದೇಶ ಹೊಂದಲಾಗಿದೆ. ಇದರಿಂದ ಸಾವಿರಾರು ಎಕರೆ ಕೃಷಿ ಭೂಮಿಗೆ ಶಾಶ್ವತ ನೀರಾವರಿ ಸೌಲಭ್ಯ ಲಭಿಸಿ, ರೈತರ ಬದುಕಿಗೆ ಆರ್ಥಿಕ ಸ್ಥಿರತೆ ಸಿಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ. ಮಸ್ಕಿ ತಾಲ್ಲೂಕು ವರ್ಷಗಳಿಂದ ಮಳೆಯ ಕೊರತೆ, ಭೂಗರ್ಭ ಜಲಮಟ್ಟ ಕುಸಿತ ಮತ್ತು ಬೆಳೆ ನಷ್ಟದ ಸಮಸ್ಯೆಗಳನ್ನು ಎದುರಿಸುತ್ತಿದೆ.

ಈ ಹಿನ್ನೆಲೆ ನಾರಾಯಣಪುರ ಬಲದಂಡೆ ಕಾಲುವೆ ಆಧಾರಿತ ಯೋಜನೆ ತಾಲ್ಲೂಕಿನ ಕೃಷಿ ಆರ್ಥಿಕತೆಯ ದಿಕ್ಕನ್ನೇ ಬದಲಾಯಿಸುವ ಶಕ್ತಿ ಹೊಂದಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಆಡಳಿತಾತ್ಮಕ ಅನುಮೋದನೆ ದೊರೆತ ಹಿನ್ನೆಲೆಯಲ್ಲಿ ಶೀಘ್ರದಲ್ಲೇ ತಾಂತ್ರಿಕ ಪರಿಶೀಲನೆ, ಭೂಸ್ವಾಧೀನ ಪ್ರಕ್ರಿಯೆ ಹಾಗೂ ಕಾಮಗಾರಿಗೆ ಟೆಂಡರ್ ಆಹ್ವಾನ ಪ್ರಕ್ರಿಯೆ ಆರಂಭವಾಗುವ ಸಾಧ್ಯತೆ ಇದೆ. ರಾಜಕೀಯ ಇಚ್ಛಾಶಕ್ತಿ: ಮಸ್ಕಿ ಶಾಸಕರಾದ ಬಸನಗೌಡ ತುರ್ವಿಹಾಳ ಅವರು ಈ ಯೋಜನೆಗಾಗಿ ನಿರಂತರವಾಗಿ ಒತ್ತಡ ಹೇರುತ್ತಿದ್ದರು. ಈ ಅನುಮೋದನೆಯು ಈ ಭಾಗದ ಕೃಷಿ ಚಟುವಟಿಕೆಗಳಿಗೆ ಹೊಸ ಚೈತನ್ಯ ನೀಡಲಿದೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### MD in Nutrition & Dietetics

ನಿಮ್ಮ BNYS (ಬ್ಯಾಚುಲರ್ ಆಫ್ ನೇಚರೋಪತಿ ಮತ್ತು ಯೋಗಿಕ್ ಸೈನ್ಸಸ್) ಪೂರ್ಣಗೊಳಿಸಿದ ನಂತರ ನೀವು ನ್ಯೂಟ್ರಿಷನ್ & ಡಯೆಟಿಕ್ಸ್‌ನಲ್ಲಿ MD ಪದವಿಯನ್ನು (ಸಾಮಾನ್ಯವಾಗಿ ಡಯಟ್ & ನ್ಯೂಟ್ರಿಷನ್‌ನಲ್ಲಿ MD ಅಥವಾ ಡಯೆಟಿಕ್ಸ್ ವಿಶೇಷತೆಯೊಂದಿಗೆ ನೇಚರೋಪತಿಯಲ್ಲಿ MD ಎಂದು ಕರೆಯಲಾಗುತ್ತದೆ) ಮುಂದುವರಿಸಬಹುದು. ಏಕೆಂದರೆ ಇದು BNYS ಪದವೀಧರರಿಗೆ ಮಾನ್ಯತೆ ಪಡೆದ ಸ್ನಾತಕೋತ್ತರ ಮಾರ್ಗವಾಗಿದೆ, ಇದು ಖಉಗಊಖ ಮತ್ತು ಸುಭಾರ್ತಿ ವಿಶ್ವವಿದ್ಯಾಲಯದಂತಹ ವಿಶ್ವವಿದ್ಯಾಲಯಗಳು ಈ ಕಾರ್ಯಕ್ರಮಗಳನ್ನು ನೀಡುವುದರಿಂದ ಸಮಗ್ರ ಆರೋಗ್ಯದೊಳಗೆ ಪೌಷ್ಟಿಕಾಂಶದಲ್ಲಿ ವಿಶೇಷತೆಯನ್ನು ಅನುಮತಿಸುತ್ತದೆ. ಅರ್ಹತೆಗೆ ಸಾಮಾನ್ಯವಾಗಿ BNYS ಪದವಿ, ಇಂಟರ್ನ್‌ಶಿಪ್ ಪೂರ್ಣಗೊಳಿಸುವಿಕೆ ಮತ್ತು ಶಾಶ್ವತ ನೋಂದಣಿ ಅಗತ್ಯವಿರುತ್ತದೆ, ಕೆಲವು ವಿಶ್ವವಿದ್ಯಾಲಯಗಳು ತಮ್ಮ ಪ್ರಕೃತಿಚಿಕಿತ್ಸಾ ಕಾರ್ಯಕ್ರಮಗಳ ಭಾಗವಾಗಿ ಡಯಟ್ ಮತ್ತು ನ್ಯೂಟ್ರಿಷನ್‌ನಲ್ಲಿ ನಿರ್ದಿಷ್ಟ ಒಆ ಗಳನ್ನು ನೀಡುತ್ತವೆ. ಈ ಒಆ ನಿಮಗೆ ಆಹಾರ ಪದ್ಧತಿ ಮತ್ತು ಪೌಷ್ಟಿಕಾಂಶದಲ್ಲಿ ನಿಮ್ಮ ಜ್ಞಾನವನ್ನು ಆಳಗೊಳಿಸಲು ಅನುವು ಮಾಡಿಕೊಡುತ್ತದೆ, ಅದನ್ನು ಪ್ರಕೃತಿಚಿಕಿತ್ಸಾ ತತ್ವಗಳೊಂದಿಗೆ ಸಂಯೋಜಿಸುತ್ತದೆ. ಅರ್ಹತೆ: ನಿಮಗೆ ನಿಮ್ಮ ಃಓಜಖ ಪದವಿ, ಇಂಟ-ರ್ನ್‌ಶಿಪ್ ಪ್ರಮಾಣಪತ್ರ ಮತ್ತು ಶಾಶ್ವತ ನೋಂದಣಿ ಅಗತ್ಯವಿರುತ್ತದೆ. ವಿಶ್ವವಿದ್ಯಾಲಯಗಳು: RGUHS ನಂತಹ ನಿಯಂತ್ರಕ ಸಂಸ್ಥೆಗಳೊಂದಿಗೆ ಸಂಯೋಜಿತವಾಗಿರುವ ವಿಶ್ವವಿದ್ಯಾಲಯಗಳನ್ನು ನೋಡಿ, ಅದು ಆಹಾರ ಮತ್ತು ಪೌಷ್ಟಿಕಾಂಶದಲ್ಲಿ ನಿರ್ದಿಷ್ಟ MD ಗಳನ್ನು ನೀಡುತ್ತದೆ. ಸಂಬಂಧಿತ ಕೋರ್ಸ್‌ಗಳು: ಪೌಷ್ಟಿಕಾಂಶದಲ್ಲಿ ಮೀಸಲಾದ MD ಲಭ್ಯವಿಲ್ಲದಿದ್ದರೆ, ಪರ್ಯಾಯವಾಗಿ ಪೌಷ್ಟಿಕಾಂಶದಲ್ಲಿ MSc ಅಥವಾ MPH(ಮಾಸ್ಟರ್ ಆಫ್ ಪಬ್ಲಿಕ್ ಹೆಲ್ತ್) ಅನ್ನು ಪರಿಗಣಿಸಿ.

# ವಿಜಯ ಪಬ್ಲಿಕ್ ಶಾಲೆಯಲ್ಲಿ ಹಳ್ಳಿ ಹಬ್ಬ ಕೃಷಿ ಸಂಭ್ರಮ ಮೌಲ್ಯಯುತ ಶಿಕ್ಷಣ ಅವಶ್ಯಕ:ಪತ್ರಕರ್ತ ಚಂದ್ರಶೇಖರ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಂಸ್ಕೃತಿ ಉಳಿಸುವ ಕೆಲಸ ಪ್ರತಿಯೊಬ್ಬರಿಂದ ಆಗಬೇಕು, ಇದರ ಜೊತೆಗೆ ಮೌಲ್ಯಯುತ ಶಿಕ್ಷಣ ಅವಶ್ಯಕತೆಯಿದೆ ಎಂದು ಜಿಲ್ಲಾ ಪತ್ರಕರ್ತ ಸಂಘದ ಕಾರ್ಯಕಾರಿ ಸದಸ್ಯ ಚಂದ್ರಶೇಖರ ಯರದಿಹಾಳ ಹೇಳಿದರು. ನಗರದ ವಾರ್ಡ್ ನಂಬರ್ 13ರಲ್ಲಿ ಇರುವ ವಿಜಯ ಪಬ್ಲಿಕ್ ಶಾಲೆಯಲ್ಲಿ ರೈತರ ದಿನಾಚರಣೆಯ ನಿಮಿತ್ಯ ಹಮ್ಮಿಕೊಳ್ಳಲಾಗಿದ್ದ ಹಳ್ಳಿ ಹಬ್ಬ ಕೃಷಿ ಸಂಭ್ರಮ ವಿಶಿಷ್ಟ ಕಾರ್ಯಕ್ರಮದಲ್ಲಿ ಮಂಗಳವಾರ ಮಾತನಾಡಿ, ಗುಣ ಮಟ್ಟದ ಶಿಕ್ಷಣ ಇಂದಿನ ದಿನಮಾನದಲ್ಲಿ ಅವಶ್ಯಕತೆ ಇದೆ. ಆಗ ಮಾತ್ರ ಶಿಕ್ಷಣ ಸಂಸ್ಥೆಗಳು ಬೆಳೆಯಲು ಸಾಧ್ಯವಾಗುತ್ತದೆ.**

ಇಂದಿಗೂ ಸಂಸ್ಕೃತಿ ತಿಳಿಯಬೇಕಾದರೆ ಹಳ್ಳಿಗಳಲ್ಲಿ ನೋಡುವಂತದ್ದು ಹಾಗಿದೆ, ಪ್ರತಿಯೊಂದು ಹಬ್ಬ ಸಡಗರ ಸಂಭ್ರಮದಿಂದ ಆಚರಿಸುವ ಕೆಲಸ ಹಳ್ಳಿಗಳಲ್ಲಿ ಆಗುತ್ತದೆ. ಅದೇ ತರ ನಗರದಲ್ಲಿ ಇನ್ನು ಹೆಚ್ಚು ಹೆಚ್ಚು ಸಂಭ್ರಮ ಹಬ್ಬಗಳು ಆದರೆ ಮತ್ತಷ್ಟು ಸಂಸ್ಕೃತಿ ಉಳಿಸಿ ಬೆಳೆಸಲು ಸಾಧ್ಯವಾಗುತ್ತದೆ ಎಂದರು. ನಿವೃತ್ತಿ ಶಿಕ್ಷಕ ವೆಂಕನಗೌಡ ವಟಗಲ್ ಮಾತನಾಡಿ, ಹಿಂದಿನ ಕಾಲದ ಪದ್ಧತಿಗಳು ಈಗ ಕ್ಷೀಣಿಸುವ ಹಂತಕ್ಕೆ ತಲುಪಿದೆ. ಆಗ ಹಳ್ಳಿಯಲ್ಲಿ ವೈಶಿಷ್ಟ್ಯತೆಯ ವೇಷ ಭೂಷಣಗಳು ಮತ್ತು



ಅಕ್ಕ ಪಕ್ಕದವರು ಸಡಗರ ಸಂಭ್ರಮದಿಂದ ಯಾವುದೇ ಕಾರ್ಯಕ್ರಮವಿರಲಿ ಆಚ-ರಿಸುವ ಕೆಲಸವಾಗುತ್ತಿತ್ತು. ಹಳ್ಳಿಗಳಲ್ಲಿ ಇನ್ನೂ ಹಳೆಯ ಆಚರಣೆಗಳು ಈಗಲೂ ಇದ್ದಾವೆ, ಅವೆಲ್ಲವನ್ನೂ ನೆನಪಿಸುವ ಕೆಲಸ ಈಗಿನ ಕಾಲದ ವಿದ್ಯಾರ್ಥಿಗಳಿಗೆ ಮಾಡುವುದು ಅವಶ್ಯಕತೆಯಿದೆ.

ಗುಣಮಟ್ಟದ ಶಿಕ್ಷಣವು ಅವಶ್ಯಕ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಅವಶ್ಯಕತೆ ಇದೆ, ಇಂದಿನ ದಿನಮಾನದಲ್ಲಿ ಹಣಕ್ಕಾಗಿ ಶಿಕ್ಷಣ ಸಂಸ್ಥೆಗಳು ಆಗಬಾರದು ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸುವ ಗುಣ ಇಟ್ಟುಕೊಂಡು ಶಿಕ್ಷಣ ಸಂಸ್ಥೆಗಳು ಆರಂಭವಾದರೆ, ಅಂತ ಶಿಕ್ಷಣ ಸಂಸ್ಥೆಗಳು ಬೆಳೆಯಲು ಸಾಧ್ಯವಾಗುತ್ತದೆ, ವಿಜಯ ಪಬ್ಲಿಕ್ ಶಾಲೆಯನ್ನು ಸಮಾನ ಮನಸ್ಕರ ಗೆಳೆಯರು ಕಟ್ಟಿರುವುದು ಒಂದು ಸಂತೋಷಕರ ವಿಷಯವಾಗಿದೆ. ಇತ್ತೀಚಿಗೆ ವಿದ್ಯಾರ್ಥಿಗಳು ಫಲಿತಾಂಶ ಜೊತೆಗೆ ಕ್ರೀಡೆಗಳಲ್ಲೂ ಸಹ ಉತ್ತಮ ಸಾಧನೆ ಮಾಡುತ್ತಿರುವುದು ಒಂದು ಶ್ಲಾಘನೀಯ ಕೆಲಸ ಎಂದರು.

ಆದಿತ್ಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸುರೇಶರೆಡ್ಡಿ ಮಾತನಾಡಿ, ವಿಜಯ್ ಪಬ್ಲಿಕ್ ಶಾಲೆಯ ಆಡಳಿತ ಮಂಡಳಿಯವರಲ್ಲಿ ತಂದೆ, ತಾಯಿಯ ಗುಣ ಇದೆ, ಅನೇಕ ಮಕ್ಕಳನ್ನು ತಂದೆ ತಾಯಿತರ ಮಕ್ಕಳನ್ನು ಪ್ರೀತಿ ಮಾಡುವ ಗುಣ ಈ ಶಾಲೆಯಲ್ಲಿ ಕಾಣುತ್ತಿದೆ, ಮೌಲ್ಯಗಳನ್ನು ಬೆಳೆಸುವ ಗುಣ ಪ್ರತಿಯೊಬ್ಬರಲ್ಲಿ ಬರಬೇಕು ಆಗ ಮಾತ್ರ ಇಂತಹ ಸಂಸ್ಥೆಗಳಿಗೆ ಹೆಸರು ಬರಲು ಸಾಧ್ಯ ಎಂದರು.

ನಿವೃತ್ತಿ ಶಿಕ್ಷಕರ ಬೀರಪ್ಪ ಶಂಭೂಜಿ ಮಾತನಾಡಿ, ರೈತರ ದಿನಾಚರಣೆಯ ಪ್ರಯುಕ್ತ ಹಳ್ಳಿಯ ಸಂಸ್ಕೃತಿ ಉಳಿಸುವ ಕೆಲಸ ಶಾಲೆಯಲ್ಲಿ ಆಗಿದೆ, ಶಾಲೆ ಆವರಣದಲ್ಲಿ ತರಕಾರಿ ಮಾಡುವುದು, ಭಾವಿಕಟ್ಟೆ, ಇನ್ನಿತರ ಅನೇಕ ವೈಶಿಷ್ಟತೆಯ ಪ್ರದರ್ಶನಗಳು ಏರ್ಪಡಿಸುವುದು ಒಂದು ಸಂಸ್ಕೃತಿಗೆ ಈ ಶಾಲೆ ಮುಖ್ಯವಾಗಿದೆ ಎಂದರು.

ಎತ್ತಿನ ಬಂಡಿಯಲ್ಲಿ ಮಕ್ಕಳ ಮೆರವಣಿಗೆ: ಮುಖ್ಯ ರಸ್ತೆಗಳಲ್ಲಿ ಎತ್ತಿನ ಬಂಡಿಯ ಮೂಲಕ ಶಾಲಾ ವಿದ್ಯಾರ್ಥಿಗಳನ್ನು ಕೂಡಿಸಿಕೊಂಡು ಮೆರವಣಿಗೆ ನಡೆಸಿದರು. ಇದೇ ವೇಳೆ ಡೊಳ್ಳು ಕುಣಿತ ಶಾಲೆಯ ವಿದ್ಯಾರ್ಥಿಗಳು ಅನೇಕ ರೀತಿಯಲ್ಲಿ ವೇಷ ಧಾರೆ ಧ-ರಿಸಿರುವುದು ನೋಡುಗರ ಗಮನ ಸೆಳೆಯಿತು. ಈ ಸಂದರ್ಭದಲ್ಲಿ: ಸಂಸ್ಥೆಯ ಮುಖ್ಯಸ್ಥರು ಹಾಗೂ ಮುಖ್ಯಗುರುಗಳಾದ ಹನುಮೇಶ ಗುಡುದೂರು, ಉಪನ್ಯಾಸಕ ಚಾಂದ್ ಪಾಷಾ, ನಿರುಪಾದಿ ಅರಳಹಳ್ಳಿ, ಶಿಕ್ಷಕಿಯರಾದ ಶಾರದಾ, ನಾಜಿಯ್, ಅನುಪ್ರಿಯಾ, ಶಾಹಿನಿ, ಸೇ-ರಿದಂತೆ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

## ಬಿಸಿಎಂ ವಿದ್ಯಾರ್ಥಿ ವೇತನ, ಶುಲ್ಕ ವಿನಾಯಿತಿಗೆ ಅರ್ಜಿ ಸಲ್ಲಿಕೆ ಅವಧಿ ಜನವರಿ 31ರವರೆಗೆ ವಿಸ್ತರಣೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 23 (ಕರ್ನಾಟಕ ವಾರ್ತೆ): ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ ಮತ್ತು ಶುಲ್ಕ ವಿನಾಯಿತಿ ಯೋಜನೆಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು 2026ರ ಜನವರಿ 31ರವರೆಗೆ ವಿಸ್ತರಣೆ ಮಾಡಲಾಗಿದೆ.**

ಪಿ.ಯು.ಸಿ ಮತ್ತು ಸಾಮಾನ್ಯ ಪದವಿ ಕೋರ್ಸುಗಳನ್ನು ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025-26 ನೇ ಸಾಲಿಗೆ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 31.01.2026 ರವರೆಗೆ ಪೋಷಕರು/ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ: http://ssp.postmatric.karnataka.gov.in/ ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಬೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ: http://bcwd.karnataka.gov.in ಇಲಾಖೆ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಇಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್: postmatrichelp@karnataka.gov.in ದೂರವಾಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನೆಕಲ್ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ದಲಿತಪರ ಸಂಘಟನೆಗಳಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನೆ



❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ತಾಲೂಕಿನ ಜಾನೆಕಲ್ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಹಾಗೂ ವಿವಿಧ ದಲಿತಪರ ಸಂಘಟನೆಗಳಿಂದ ನಡೆದ ಪ್ರತಿಭಟನೆ ಧರಣಿಯಲ್ಲಿ ಗವಿಗಟ್ಟ ಗ್ರಾ.ಪಂ.ಸದಸ್ಯ ದೇವೆಂದ್ರಪ್ಪ ಮಾತನಾಡಿ ಜಾನೆಕಲ್ ಗ್ರಾಮಪಂಚಾಯಿತಿಯಲ್ಲಿ 15 ನೇ ಹಣಕಾಸು ಯೋಜನೆಯ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ಪರಿಶೀಲನೆ ನಡೆಸಬೇಕು,ಗ್ರಾ.ಪಂ. ವತಿಯಿಂದ ಸಂಗ್ರಹಿಸಲಾದ ತೆರಿಗೆ ಹಣದ ಮಾಹಿತಿ ನೀಡಬೇಕು.**

ಬಸವ ವಸತಿ,ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳನ್ನು ಗ್ರಾಮ ಸಭೆ ಮೂಲಕ ಹಂಚಿಕೆ ಮಾಡಬೇಕು, ಈ ಸ್ವತ್ತು ಯೋಜನೆಯಡಿಯಲ್ಲಿ ಆಸ್ತಿ ಮಾಲಿಕರಿಗೆ ಖಾತಾ ಉತಾರ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿನಾಕರಣ ವಿಳಂಬ ಮಾಡುವ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ,ಗವಿಗಟ್ಟ ಗ್ರಾಮದಲ್ಲಿ ಶಕ್ತಿ ಭವನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು,ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು, ಗ್ರಾಮದ ಶಾಲೆಯಲ್ಲಿ ಕೈಗೊಳ್ಳಲಾದ ಮಳೆನೀರು ಕೋಯ್ಲು ಕಾಮಗಾರಿ, ಮರಂ ರಸ್ತೆ ಕಾಮಗಾರಿಯ ಬಾಕಿ ಇರುವ ಬಿಲ್ ಪಾವತಿ ಮಾಡಬೇಕು,ನರೇಗಾ ಕೂಲಿ ಕಾರ್ಮಿಕರಿಗೆ ಸಮರ್ಪಕವಾಗಿ ಕೂಲಿ ಕೆಲಸವನ್ನು ನೀಡದೆ ಇರುವ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು. ಎಂದು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಜೆ.ರಮೇಶ ನಾಯಕ ಗವಿಗಟ್ಟ, ದಲಿತ ಸೇನೆ ತಾ.ಅಧ್ಯಕ್ಷರಾದ ರಮೇಶ ಕರೆಗುಡ್ಡ,ಗೌ. ಅಧ್ಯಕ್ಷರಾದ ಕರಿಯಪ್ಪ ನಕ್ಕುಂದಿ, ಭೀಮರಾಯ, ಮುತ್ತಣ್ಣ, ಹುಸೇನಪ್ಪ,ಮಾರೇಶ, ಬಿ.ಅಮರೇಶನಾಯಕ,ಮಾರೇಶ ಬಂಡಾರಿ, ಬಡಕಪ್ಪ,ನಾಗರಾಜ,ಶಾಂತ ಕುಮಾರ, ಚನ್ನಪ್ಪ ಗೌಡ, ಮೌನೇಶ, ಮರಿಸ್ವಾಮಿ,ಸುಧಾಕರ ಅರೋಲಿ, ಸೇರಿದಂತೆ ಇನ್ನಿತರರು ಇದ್ದರು.

# ದೇವದುರ್ಗದಲ್ಲಿ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆಯ ಛಾಯಚಿತ್ರ ಪ್ರದರ್ಶನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 23 (ಕರ್ನಾಟಕ ವಾರ್ತೆ): ಕೇಂದ್ರ ಸಂವಹನ ಇಲಾಖೆ ಬಳ್ಳಾರಿ, ಭಾರತ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಹಾಗೂ ದೇವದುರ್ಗ ಜ್ಞಾನ ಜ್ಯೋತಿ ಪದವಿ ಪೂರ್ವ ಕಾಲೇಜು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ದೇವದುರ್ಗ ತಾಲೂಕಾಡಳಿತ, ತಾಲ್ಲೂಕು ಪಂಚಾಯತ್,**

ಆರೋಗ್ಯ ಇಲಾಖೆ, ಪುರಸಭೆ ಇವರ ಆಶ್ರಯದಲ್ಲಿ ವಂದೇ ಮಾತರಂ ಗೀತೆಯ 150ನೇ ವರ್ಷಾಚರಣೆ ವಿಕಸಿತ ಭಾರತ-2047 ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳ ಕುರಿತು ಛಾಯಚಿತ್ರ ಪ್ರದರ್ಶನ ಕಾರ್ಯಕ್ರಮವು ಡಿಸೆಂಬರ್ 23ರಂದು ನಡೆಯಿತು. ದೇವದುರ್ಗ ಪಟ್ಟಣದ ಖೇಣೇದ ಫಂಕ್ಷನ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ದೇವದುರ್ಗದ ಉಪ ತಹಸೀಲ್ದಾರ




ಭೀಮರಾಮ್ ಮೇಟಿ ಅವರು ಮಾತನಾಡಿ, ಸ್ವಾತಂತ್ರ ಹೋರಾಟದಲ್ಲಿ ವಂದೇ ಮಾತರಂ ಗೀತೆಯು ಮಹತ್ವದ ಕೊಡುಗೆ ನೀಡಿ, ರಾಷ್ಟ್ರದ ಏಕತೆ ಸಾಧಿಸಲು ಅವಕಾಶ ನೀಡಿತು ಎಂದರು. ಈ ವೇಳೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣ ಅಧಿಕಾರಿಗಳಾದ ಬಸವರಾಜ್ ಹಟ್ಟಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಭಾರತದ ಸಂವಿಧಾನ ಮತ್ತು ಭಾರತೀಯರ ಒಗ್ಗಟ್ಟು ವಸಹತುಶಾಹಿ, ಪಟ್ಟಭದ್ರ ಆಡಳಿಕ್ಕೆ ಅವಕಾಶ ನೀಡದೆ.

ನಾವೆಲ್ಲರೂ ಒಂದೇ ಎನ್ನುವ ಭಾವನೆಯನ್ನು ವಂದೇ ಮಾತರಂ ಮೂಡಿಸುತ್ತಿದೆ ಮತ್ತು ಏಕತೆಯನ್ನು ಸಾಧಿಸಲು ಅನುಕೂಲವಾಗಿದೆ ಎಂದು ತಿಳಿಸಿದರು. ಈ ವೇಳೆ ಸಂಪನ್ಮೂಲ ವ್ಯಕ್ತಿಗಳಾಗಿ ಎಸ್.ಕೆ. ಎಮ್. ಪಿ.ಯು.ಕಾಲೇಜಿನ ಪ್ರಾಂಶುಪಾಲರಾದ ಸಿದ್ದಯ್ಯ ಸ್ವಾಮಿ ಅವರು ಮಾತನಾಡಿ, ವಂದೇ ಮಾತರಂ ಗೀತೆಯ ಅರ್ಥ ಮತ್ತು ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ವಹಿಸಿದ ಮಹತ್ವದ ಪಾತ್ರದ ಕುರಿತು ವಿವರಿಸಿದರು. ಇದಕ್ಕೂ ಮುಂಚೆ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆ ಪ್ರಸುತಪಡಿಸಿ ಗೌರವ ಸಲ್ಲಿಸಲಾಯಿತು. ಅಲ್ಲದೆ ಹಿಂದಿನ ದಿನ ಅಯೋಜಿಸಲಾಗಿದ್ದ ವಿಶೇಷ ರಂಗೋಲಿ ಸ್ಪರ್ಧೆ, ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಅತಿಥಿಗಳಿಂದ ಬಹುಮಾನ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಪುರಸಭೆಯ ಮುಖ್ಯಾಧಿಕಾರಿಗಳಾದ ಹಂಪಯ್ಯ, ದೇವದುರ್ಗದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರಾದ ಸುಭಾಷ್ ಚಂದ್ರ ಪಾಟೀಲ್, ಜ್ಞಾನ ಜ್ಯೋತಿ ಕಾಲೇಜಿನ ಪ್ರಾಂಶುಪಾಲರಾದ ಅಮೀರ್, ದೇವದುರ್ಗ ತಾಲ್ಲೂಕು ಪತ್ರಕರ್ತ ಸಂಘದ ಅಧ್ಯಕ್ಷರಾದ ನರಸಿಂಗರಾವ್, ಕಾರ್ಯದರ್ಶಿಗಳಾದ ಬಂದೇ ನವಾಜ್, ಶಿಶು ಅಭಿವೃದ್ಧಿ ಯೋಜನಾಧಿಕಾ-ರಿಗಳ ಕಚೇರಿಯ ಸಹಾಯಕರಾದ ಗಂಗಮ್ಮ ಇದ್ದರು. ಬಿ.ಲಕ್ಷ್ಮಣ ಅವರು ಸ್ವಾಗತಿಸಿದರು. ರಾಜಶೇಖರ್ ಅವರು ನಿರೂಪಿಸಿ, ವಂದಿಸಿದರು.

# ಮಹಾತ್ಮಾ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ತಿದ್ದುಪಡಿ ಮಸೂದೆ ಹಿಂಪಡೆಯಲಿ

❑ ನೈಜ್ಯ ದೆಸೆ ನ್ಯೂಸ್

**ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ,ವ್ಯಾಪಕವಾಗಿ ಹಣವನ್ನು ದೋಚಲಾಗುತ್ತಿದೆ ಎನ್ನುವ ಕಾರಣ ನೀಡಿ ಯೋಜನೆಯ ಹೆಸರು ಮತ್ತು ಸ್ವರೂಪವನ್ನು ಬದಲಿಸುತ್ತಿರುವುದು ಹಾಸ್ಯಾಸ್ಪದವಾಗಿದೆ ಎಂದು ಕೆ ಆರ್ ಎಸ್ ಪಕ್ಷದ ರಾಜ್ಯ ರೈತ ಘಟಕದ ಕಾರ್ಯದರ್ಶಿ ನಿರುಪಾದಿ ಕೆ ಗೋಮರ್ಸಿ ಪತ್ರಿಕಾ ಹೇಳಿಕೆ ಮುಖಾಂತರ ಆಗ್ರಹ ಪಡಿಸಿದರು.**

ಸಂಪೂರ್ಣ ಒಕ್ಕೂಟ ಸರ್ಕಾರ ಪ್ರಾಯೋಜಿತವಾಗಿರುವ ಈ ಯೋಜನೆಗೆ ಒಕ್ಕೂಟ ಸರ್ಕಾರವು ತನ್ನ ಪಾಲಿನ ಅನುದಾನವನ್ನು ಕಡಿತ ಮಾಡಿ, ರಾಜ್ಯ ಸರ್ಕಾರಗಳು ಕೂಡ ಹಣವನ್ನು ನೀಡಬೇಕೆಂದು ತಿದ್ದುಪಡಿ ತರುವುದರಿಂದ ಯಾವ ರೀತಿಯಲ್ಲಿ ಭ್ರಷ್ಟಾಚಾರ ಕಡಿಮೆ ಮಾಡಲಾಗುತ್ತದೆ ಎಂದು ತಿಳಿಯುತ್ತಿಲ್ಲ. ಅನುದಾನದ ಮೂಲ ಯಾವುದಿದ್ದರೂ ಕೂಡ, ಹಣವನ್ನು ದೋಚುವುದುಕ್ಕೆ ಯಾವುದೇ ಕಡಿವಾಣ ಬೀಳುವುದಿಲ್ಲ ಎನ್ನುವುದು ಸ್ಪಷ್ಟವಾಗಿದೆ. ಇತರೆ ಯೋಜನೆಗಳಂತೆ, ಈ ಯೋಜನೆಯಲ್ಲಿಯೂ ಕೂಡ ಬ್ರಹ್ಮಾಂಡ ಭ್ರಷ್ಟಾಚಾರ ನಡೆಯುತ್ತಿದ್ದು, ಈ ಬಗ್ಗೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷವು ಸ್ಥಳೀಯವಾಗಿ ನಿರಂತರವಾಗಿ ಹೋರಾಟ ಮಾಡುತ್ತಾ ಬರುತ್ತಿದೆ. ಈ ಭ್ರಷ್ಟಾಚಾರದಲ್ಲಿ ಒಕ್ಕೂಟ ಸರ್ಕಾರ ನಡೆಸುತ್ತಿರುವ ಬಿಜೆಪಿ ಮತ್ತು ಅದರಲ್ಲಿ ಪಾಲುದಾರಾಗಿರುವ ಅವರ ಮಿತ್ರ ಪಕ್ಷಗಳು ಸೇರಿದಂತೆ ವಿರೋಧ ಪಕ್ಷಗಳು ಭಾಗಿಯಾಗಿವೆ.

ಈ ವಿಚಾರಗಳು ಎಲ್ಲರಿಗೂ ತಿಳಿದಿರುವ ಬಹಿರಂಗ ಸತ್ಯವಾಗಿದೆ. ಒಕ್ಕೂಟ ಸರ್ಕಾರವು, ಈ ಯೋಜನೆಗೆ ನೀಡಿರುವ ಅನುದಾನ ಯಾವ ರೀತಿ ದೋಚಲಾಗಿದೆ ಮತ್ತು ಆ ಹಣ ಯಾವೆಲ್ಲ ದೇಶದ್ರೋಹಿ ಕೆಲಸಗಳಿಗೆ ಬಳಕೆಯಾಗುತ್ತಿದೆ ಎಂದು ತನ್ನ ತನಿಖಾ ಸಂಸ್ಥೆಗಳ ಮೂಲಕ ತನಿಖೆ ಮಾಡಿಸುವ ಕೆಲಸವನ್ನು ಒಕ್ಕೂಟ ಸರ್ಕಾರ ಮೊದಲು ಮಾಡಬೇಕಿದೆ, ಆದ-'ರೆ ಆ ಕೆಲಸ ಅವರಿಗೆ ಬೇಕಾಗಿಲ್ಲ. ತನಿಖಾ ಸಂಸ್ಥೆಗಳನ್ನು ಇಂತಹ ಭ್ರಷ್ಟಾಚಾರದ ತನಿಖೆ ಮಾಡಲು ಬಳಸಿಕೊಳ್ಳದೆ, ತನ್ನ ರಾಜಕೀಯ ಮತ್ತು ಸೈದ್ಧಾಂತಿ-ಕ ವಿರೋಧಿಗಳನ್ನು ಮಣಿಸಲು ಬಳಕೆ ಮಾಡುತ್ತಿದೆ. ಬೃಹತ್ ಪ್ರಮಾಣದಲ್ಲಿ ಹಣ ದೋಚಲಾಗುತ್ತಿದೆ ಎಂದು ಹೇಳುತ್ತಿರುವ ಒಕ್ಕೂಟ ಸರ್ಕಾರವು, ಒಂದು ದಶಕಕ್ಕಿಂತಲೂ ಹೆಚ್ಚಿನ ಅವಧಿಯಲ್ಲಿ, ಭ್ರಷ್ಟಾಚಾರ ತಡೆಯಲು ಯಾವ ಕ್ರಮವನ್ನು ಕೈಗೊಂಡಿರುವುದಿಲ್ಲ, ದೇಶದ ಬಹುತೇಕ ರಾಜ್ಯಗಳಲ್ಲಿ ಆಡಳಿತ ನಡೆಸುತ್ತಿರುವುದು ಬಿಜೆಪಿ ಮತ್ತು ಅದರ ಮಿತ್ರ ಪಕ್ಷಗಳು, ಅಂದರೆ, ತನ್ನದೇ ಪಕ್ಷದವರು ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಾರೆ ಎಂದು ಅದು ಬಿಜೆಪಿ ಪಕ್ಷವು ನೇರವಾಗಿ ಒಪ್ಪಿಕೊಂಡಂತಾಯಿತು ಮತ್ತು ತನ್ನದೇ ಪಕ್ಷದವ-ರಿಂದ ನಡೆಯುತ್ತಿರುವ ಈ ಮಹಾ ಭ್ರಷ್ಟಾಚಾರವನ್ನು ನಿಲ್ಲಿಸಲು ಸಾಧ್ಯವಾಗುವುದಿಲ್ಲ ಎಂದು ಹೇಳುತ್ತಿದೆ.

ಕೇವಲ ಅನುದಾನದಲ್ಲಿ ರಾಜ್ಯ ಸರ್ಕಾರದ ಪಾಲು ಇದೆ ಎಂದ ಮಾತ್ರಕ್ಕೆ, ರಾಜ್ಯ ಸರ್ಕಾರಗಳು ಹಣವನ್ನು ಸದ್ಬಳಕೆ ಮಾಡಿಕೊಳ್ಳುತ್ತವೆ ಎಂದು ನಿರೀಕ್ಷಿಸುವುದು ಮೂರ್ಖತನವಾಗುತ್ತದೆ. ಈಗಲೂ ಭ್ರಷ್ಟಾಚಾರ ನಿಗ್ರಹಿಸುವ ಮೂಲಕ ಈ ಯೋಜನೆಯನ್ನು



ಸರಿದಾರಿಗೆ ತರುವ ಸಂಪೂರ್ಣ ಅವಕಾಶ ಒಕ್ಕೂಟ ಸರ್ಕಾರದ ಮುಂದಿದೆ, ಆದರೆ ಅದ್ಯಾವ ಕ್ರಮವನ್ನು ಮಾಡದೆ, ಭ್ರಷ್ಟಾಚಾರವನ್ನು ನೆಪವಾಗಿಸಿಕೊಂಡು ತನ್ನ ಅನೂಕಲಕ್ಕೆ ತಕ್ಕಂತೆ ಯೋಜನೆಯಲ್ಲಿ ಬದಲಾವಣೆ ಮಾಡಲು ಮುಂದಾಗಿರುವುದು ದುರುದ್ದೇಶ ಎನ್ನುವುದು ಸ್ಪಷ್ಟವಾಗಿದೆ. ಇಲ್ಲಿಯವರೆಗೂ ಈ ವಿಚಾರದ ಬಗ್ಗೆ ಎಂದೂ ಚಕಾರವೆತ್ತದೆ, ಏಕಾಏಕಿ ಬದಲಾವಣೆ ತರಲು ಹೊರಟಿರುವುದು ಅದರ ದುರುದ್ದೇಶವೆ ಹೊರತು ಮತ್ತಿನ್ನೇನಿಲ್ಲ.

ರಾಜ್ಯ ಸರ್ಕಾರಗಳೂ ಕೂಡಾ ಈ ಯೋಜನೆಗೆ ಅನುದಾನ ನೀಡುವ ಮೂಲಕ ತನ್ನ ಪಾಲಿನ ಅನುದಾನದಲ್ಲಿ ಕಡಿತ ಮಾಡಿ, ಉಳಿದ ಹಣವನ್ನು ತನ್ನಿಷ್ಟದ ರಾಜ್ಯಗಳಿಗೆ ಹಂಚಿಕೆ ಮಾಡುವ, ಆ ಮೂಲಕ ಕರ್ನಾಟಕ ಸೇರಿದಂತೆ ಇತರೆ ಕೆಲವು ರಾಜ್ಯಗಳ ಆರ್ಥಿಕ ಸ್ವಾತಂತ್ರ್ಯವನ್ನು ಕಸಿದುಕೊಳ್ಳುವ ಮತ್ತು ದುರ್ಬಲಗೊಳಿಸಿ, ಇಡೀ ಯೋಜನೆಯೆ ಸಂಪೂರ್ಣವಾಗಿ ನಿಷ್ಕ್ರಿಯವಾಗುವಂತಹ ಸ್ಥಿತಿಗೆ ತರುವುದು ಹಾಗು ನಿಷ್ಕ್ರಿಯವಾಗಲು ಆಗ ರಾಜ್ಯಗಳನ್ನು ನೆಪ ಮಾಡುವುದು ಈ ತಿದ್ದುಪಡಿಯ ಮೂಲ ಉದ್ದೇಶವಾಗಿದೆ. ಇದರಿಂದ, ಕೃಷಿ ಚಟುವಟಿ-ಕೆಯಲ್ಲಿ ನಿರತರಾಗಿರುವ ಗ್ರಾಮೀಣ ಭಾಗದ ಸಣ್ಣ ರೈತರು, ಕೃಷಿಯಿಂದ ವಿಮುಖರಾಗಿ, ಭೂಮಿಯನ್ನು ಮಾರಾಟ ಮಾಡುವಂತ ಪರಿಸ್ಥಿತಿ ನಿರ್ಮಾಣ ಮಾಡಿ, ಭೂಮಿಯನ್ನು ಕೈಗಾರಿಕೆಗಳಿಗೆ ಒದಗಿಸುವುದು, ಬೃಹತ್ ಹಿಡುವಳಿದಾರರಿಗೆ ಅನುಕೂಲ ಮಾಡಿಕೊಡುವುದು, ಭೂ ವಂಚಿತರಾದವರು ಕಡಿಮೆ ಹಣಕ್ಕೆ ಕಾರ್ಖಾನೆಗಳಲ್ಲಿ ಗುಲಾಮರಂತೆ ಕೆಲಸ ಮಾಡಬೇಕಾದ ವಾತಾವರಣ ನಿರ್ಮಿಸುವುದು ಈ ತಿದ್ದುಪಡಿಗಳ ಮೂಲಕ ಸಾಧಿಸಲು ಹೊರಟಿರುವ ಹಿನ್ನೆಲೆಯಲ್ಲಿನ ಅಜೆಂಡಾಗಳಾಗಿವೆ.

ಒಕ್ಕೂಟ ಸರ್ಕಾರದ ಈ ದುರುದ್ದೇಶದಿಂದ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಿಂದ ಗ್ರಾಮೀಣ ಜನರ ತಕ್ಕ ಮಟ್ಟಿಗೆ ನೆಮ್ಮದಿಯ ಜೀವನವನ್ನು ಕಿತ್ತುಕೊಂಡು, ಬಡವರನ್ನು ಮತ್ತಷ್ಟು ನಿರ್ಗತಿಕರನ್ನಾಗಿ ಮಾಡಲಾಗುತ್ತದೆ. ಜನರಿಗೆ ಅತ್ಯವಶ್ಯಕವಾಗಿರುವ ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯವನ್ನು ಉಚಿತವಾಗಿ ಒದಗಿಸಲಾಗದ ಸರ್ಕಾರಗಳು, ಈಗ ಅವರ ದುಡಿಮೆಗೂ ಕೂಡ ಅಡ್ಡಗಾಲು ಹಾಕಲು ಮುಂದಾಗುತ್ತಿರುವುದು ದುರದೃಷ್ಟಕರ ಮತ್ತು ಇದ-ರಿಂದ ಅವರು ಆರೋಗ್ಯ ಮತ್ತು ಶಿಕ್ಷಣ ಪಡೆಯುವಲ್ಲಿ ಮತ್ತಷ್ಟು ಸಂಕಷ್ಟಕ್ಕೆ ಒಳಗಾಗಲಿದ್ದಾರೆ. ಭ್ರಷ್ಟಾಚಾರ ತಡೆಯುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದ ಬಿಜೆಪಿ, ಇಲ್ಲಿಯವರೆಗೂ ಯಾವ ಭ್ರಷ್ಟಾಚಾರವನ್ನು ತಡೆದಿರುವುದಿಲ್ಲ, ಆದರೆ ಭ್ರಷ್ಟಾಚಾರ ತಡೆಯಲಾಗಿದೆ ಎಂದು ನಂಬಿಸಲು ಮಾತ್ರ ಯಶಸ್ವಿಯಾಗಿದೆ. ಉದ್ಯೋಗ ಖಾತ್ರಿ ಮತ್ತು ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ನೀಡಬೇಕಾದ ತನ್ನ ಪಾಲಿನ ಅನುದಾನದ ಬಿಡುಗಡೆಯಲ್ಲಿ ನಿರಂತರವಾಗಿ ವಿಳಂಬ ಮಾಡಿ, ರಾಜ್ಯಗಳನ್ನು ಆರ್ಥಿಕ ಸಂಕಷ್ಟಕ್ಕೆ ದೂಡಲಾಗುತ್ತಿದೆ.

ಯೋಜನೆಗಳಲ್ಲಿ ತನ್ನ ಪಾಲು ಸಣ್ಣದಿದ್ದರೂ ಕೂಡಾ ಕೂಡ ಹೆಸರು ಮಾತ್ರ ಒಕ್ಕೂಟ ಸರ್ಕಾರದ್ದೇ ಇರಬೇಕು ಮತ್ತು ಆ ಮೂಲಕ ಪ್ರಚಾರ ಪಡೆದುಕೊಳ್ಳುವ ಕುತಂತ್ರವೂ ಇದರಲ್ಲಿ ಮತ್ತೊಮ್ಮೆ ಕಂಡುಬರುತ್ತಿದೆ. ಒಕ್ಕೂಟ ಸರ್ಕಾರದಿಂದ ಅನುದಾನ ಪಡೆಯುವಲ್ಲಿ, ಯೋಜನೆಗಳಲ್ಲಿ ನಿರಂತರವಾಗಿ ಅನ್ಯಾಯಕ್ಕೊಳಗಾಗುತ್ತಿರುವ ಕರ್ನಾಟಕಕ್ಕೆ ಈ ತಿದ್ದುಪಡಿಯು ಆರ್ಥಿಕವಾಗಿ ಮತ್ತು ಸಾಮಾಜಿ-ಕವಾಗಿ ಮತ್ತಷ್ಟು ಹಿನ್ನಡೆಯನ್ನು ಮಾಡುತ್ತದೆ. ಉದ್ಯೋಗ ಖಾತ್ರಿ ಯೋಜನೆಗೆ ತಿದ್ದುಪಡಿ ಮಾಡುವುದನ್ನು ತಕ್ಷಣವೇ ನಿಲ್ಲಿಸಬೇಕು ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಆಗ್ರಹಿಸುತ್ತದೆ. ಹಾಗೆಯೆ, ಈ ಯೋಜನೆಯಲ್ಲಿ ನಡೆಯುತ್ತಿರುವ ಮಹಾ ಭ್ರಷ್ಟಾರವನ್ನು ತಡೆಯಲು ವ್ಯಾಪಕ ಅವಕಾಶಗಳಿದ್ದು, ಅವನ್ನು ಬಲಸಿಕೊಂಡು ಸಾರ್ವಜನಿಕ ಹಣ ಸದ್ಬಳಕೆಯಾಗುವ ನಿಟ್ಟಿನಲ್ಲಿ ಕ್ರಮ ವಹಿಸಬೇಕೆಂದು ಕೂಡ ಆಗ್ರಹಿಸುತ್ತದೆ. ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.